ಸಂಪುಟ: 11 ಸಂಚಿಕೆ: 221 ಪುಟಗಳು: 4+2 ಬೆಲೆ: ₹ 3.00 ಗುರುವಾರ, ಅಕ್ಟೋಬರ್ ೦೮, ೨೦೨೬ Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 221 Pages : 4+2 Rate : 3.00 Thursday, October 08, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22




### 25 ವರ್ಷಗಳ ಸಾರ್ವಜನಿಕ ಸೇವೆ ಸ್ಮರಣೆ, 'ವಿಕಸಿತ ಭಾರತ' ಸಂಕಲ್ಪ ಸಭೆಯಲ್ಲಿ ವಿಜಯೇಂದ್ರ

# ಗದಗದಲ್ಲಿ ಮೊಳಗಿದ ಮೋದಿ ಸೇವಾ ಮಂತ್ರ

**ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅಭಿವೃದ್ಧಿಯ ಅವಕಾಶ, ಶಿಕ್ಷಣ ಹಾಗೂ ಸರ್ಕಾರದ ಸೌಲಭ್ಯಗಳು ತಲುಪಬೇಕು ಎಂಬ ಆಶಯದೊಂದಿಗೆ ಕೇಂದ್ರ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ನಗರದ ಶ್ರೀ ಜಗದ್ಗುರು ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ನಡೆದ ಪ್ರಧಾನಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವೆಯನ್ನು ಸ್ಮರಿಸಿ ರಾಷ್ಟ್ರವ್ಯಾಪಿ ಹಮ್ಮಿಕೊಂಡಿರುವ ಸೇವಾ ಜ್ಯೋತಿ ಯಾತ್ರೆ ಹಾಗೂ ವಿಕಸಿತ ಭಾರತ ಸಂಕಲ್ಪ ಸಭೆಯಲ್ಲಿ ಮಾತನಾಡಿದರು.

ಬಡವರು, ಯುವಕರು, ಅನ್ನದಾತರು ಹಾಗೂ ಮಹಿಳೆಯರನ್ನು ಕೇಂದ್ರವಾಗಿಟ್ಟುಕೊಂಡು ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಹೊಸ ದಿಕ್ಕು ನೀಡುವ ಪ್ರಯತ್ನ ನಡೆಯುತ್ತಿದೆ. ಗ್ರಾಮೀಣ ಪ್ರದೇಶಗಳಿಗೆ ವಿದ್ಯುತ್ ಸಂಪರ್ಕ, ಶೌಚಾಲಯ ಹಾಗೂ ಮೂಲ ಸೌಕರ್ಯ ಸೇರಿದಂತೆ ಜನರ ಜೀವನಮಟ್ಟ ಸುಧಾರಿಸುವ ಹಲವು ಯೋಜನೆಗಳನ್ನು ಜಾರಿಗೊಳಿಸಲಾಗಿದೆ ಎಂದರು.



## ಅದ್ದೂರಿಯಾಗಿ ಜರುಗಿದ ಸೇವಾ ಜ್ಯೋತಿ ಯಾತ್ರೆ

ಗದಗ ನಗರದ ಪಂಚಾಚಾರ್ಯ ಮಾಂಗಲ್ಯ ಮಂದಿರದಿಂದ ಸೇವಾ ಜ್ಯೋತಿ ಯಾತ್ರೆ ಆರಂಭಗೊಂಡಿತು. ರೋಟರಿ ಸರ್ಕಲ್, ಗಾಂಧಿ ಸರ್ಕಲ್, ಮಹೇಂದ್ರಕರ್ ಸರ್ಕಲ್ ಮಾರ್ಗವಾಗಿ ಸಾಗಿದ ಯಾತ್ರೆ ಹುಯಿಲಗೋಳ ನಾರಾಯಣರಾಯ ಸರ್ಕಲ್‌ನಲ್ಲಿ ಸಂಪನ್ನಗೊಂಡಿತು. ಈ ಸಂದರ್ಭದಲ್ಲಿ ಒಂಬತ್ತು ಮಂಡಲಗಳ ಕಾರ್ಯಕರ್ತರು ಸೇವಾ ಜ್ಯೋತಿ ಬೆಳಗಿಸಿದರು.

ಕೋವಿಡ್ ಮಹಾಮಾರಿ ಹಾಗೂ ರಷ್ಯಾ-ಉಕ್ರೇನ್ ಯುದ್ಧ ಸೇರಿದಂತೆ ಜಾಗತಿಕ ಸವಾಲುಗಳ ನಡುವೆಯೂ ಭಾರತವನ್ನು ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸುವ ಪ್ರಯತ್ನ ನಡೆದಿದೆ. ರಕ್ಷಣಾ, ವಿದ್ಯುತ್ ಹಾಗೂ ಆರೋಗ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸ್ವಾವಲಂಬನೆಗೆ ಒತ್ತು ನೀಡಲಾಗುತ್ತಿದೆ ಎಂದು ಹೇಳಿದರು.

ಮೇಕ್ ಇನ್ ಇಂಡಿಯಾ, ಸ್ಟಾರ್ಟಪ್ ಇಂಡಿಯಾ ಹಾಗೂ ಸ್ಕಿಲ್ ಇಂಡಿಯಾ ಯೋಜನೆಗಳ ಮೂಲಕ ಯುವಜನತೆಗೆ ಹೊಸ ಅವಕಾಶಗಳನ್ನು ಕಲ್ಪಿಸಲಾಗುತ್ತಿದೆ. 'ಸಬ್ಕಾ ಸಾಥ್, ಸಬ್ಕಾ ವಿಕಾಸ್, ಸಬ್ಕಾ ವಿಶ್ವಾಸ, ಸಬ್ಕಾ ಪ್ರಯಾಸ್' ಆಶಯದೊಂದಿಗೆ ಎಲ್ಲ ವರ್ಗದ ಜನರನ್ನು ಅಭಿವೃದ್ಧಿಯ ಮುಖ್ಯ ವಾಹಿನಿಗೆ ತರುವ ಸಂಕಲ್ಪ ಹೊಂದಲಾಗಿದೆ ಎಂದರು.

> ಅಭಿವೃದ್ಧಿಯ ಪ್ರಯೋಜನ ಕಟ್ಟಕಡೆಯ ವ್ಯಕ್ತಿಗೂ ತಲುಪಿದಾಗ ಮಾತ್ರ ವಿಕಸಿತ ಭಾರತದ ಸಂಕಲ್ಪ ಅರ್ಥಪೂರ್ಣವಾಗುತ್ತದೆ. ಯುವಜನರ ಸಾಮರ್ಥ್ಯ ವನ್ನು ದೇಶದ ಪ್ರಗತಿಗೆ ಬಳಸಿಕೊಳ್ಳುವುದು ಮುಂದಿನ ಹಂತದ ಪ್ರಮುಖ ಗುರಿಯಾಗಿದೆ.
>
> – ಬಿ.ವೈ. ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಶಾಸಕ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಅನಿಲ ಪಿ. ಮೆಣಸಿನಕಾಯಿ, ನಿರ್ಮಲಾ ಕೊಳ್ಳಿ, ಎಂ.ಎಸ್. ಕರಿಗೌಡ್ರ, ನಗರಸಭೆ ಮಾಜಿ ಅಧ್ಯಕ್ಷೆ ಉಷಾ ದಾಸರ, ಸದಸ್ಯ ರಾಘವೇಂದ್ರ ಯಳವತ್ತಿ, ಪ್ರೀತಂಗೌಡ, ಸಂತೋಷ ಅಕ್ಕಿ, ಶ್ರೀಪತಿ ಉಡುಪಿ, ಸಿದ್ದಣ್ಣ ಪಲ್ಲೇದ, ಉಮೇಶಗೌಡ್ರ ಪಾಟೀಲ, ಸುನಂದಾ ಬಾಕಳೆ, ಶ್ವೇತಾ ದಂಡಿನ, ವಿಜಯಲಕ್ಷ್ಮೀ ದಿಂಡೂರ, ವಿದ್ಯಾವತಿ ಗಡಗಿ, ವಿಜಯಲಕ್ಷ್ಮೀ ಮಾನ್ವಿ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

### 220ಕ್ಕೂ ಹೆಚ್ಚು ತೆನೆ ಬಳಸಿ ಕ್ವಿಂಟಲ್‌ಗೂ ಅಧಿಕ ತೂಕದ ಹಾರ ತಯಾರಿ

# ಗಮನ ಸೆಳೆದ ಗೋವಿನ ಜೋಳದ ಬೃಹತ್ ಹಾರ



**ವಿಜಯಸಾಕ್ಷಿ ಸುದ್ದಿ, ಗದಗ**

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರನ್ನು ಸ್ವಾಗತಿಸಲು ಹಾಗೂ ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಅವರಿಗೆ ಜನ್ಮದಿನದ ಶುಭಾಶಯ ಕೋರಲು ಅಭಿಮಾನಿಗಳು ಅರ್ಪಿಸಿದ ಗೋವಿನಜೋಳದ ಬೃಹತ್ ಹಾರ ಬುಧವಾರ ಗದಗ ನಗರದಲ್ಲಿ ನಡೆದ ಮೆರವಣಿಗೆಯಲ್ಲಿ ಎಲ್ಲರ ಗಮನ ಸೆಳೆಯಿತು.

ಪ್ರಧಾನಿ ನರೇಂದ್ರ ಮೋದಿ ಅವರ 25 ವರ್ಷದ ಸಾರ್ವಜನಿಕ ಸೇವೆಯ ಅಂಗವಾಗಿ ಆಯೋಜಿಸಿದ್ದ 'ಸೇವಾಜ್ಯೋತಿ ಯಾತ್ರೆ' ಹಾಗೂ 'ವಿಕಸಿತ ಭಾರತದ ಸಂಕಲ್ಪ ಯಾತ್ರೆ' ಹಿನ್ನೆಲೆಯಲ್ಲಿ ಬೃಹತ್ ಮೆರವಣಿಗೆ ನಡೆಯಿತು. ಈ ವೇಳೆ ಅಭಿಮಾನಿಗಳು ವಿಭಿನ್ನ ರೀತಿಯಲ್ಲಿ ತಮ್ಮ ಅಭಿಮಾನ ವ್ಯಕ್ತಪಡಿಸಿದರು.

ಅನಿಲ ಮೆಣಸಿನಕಾಯಿ ಅವರ ಅಭಿಮಾನಿಗಳು 220ಕ್ಕೂ ಹೆಚ್ಚು ಗೋವಿನಜೋಳದ ತೆನೆಗಳನ್ನು ಬಳಸಿ, ಒಂದು ಕ್ವಿಂಟಲ್‌ಗೂ ಅಧಿಕ ತೂಕದ ಬೃಹತ್ ಹಾರ ಸಿದ್ಧಪಡಿಸಿದ್ದರು.

ಕ್ರೇನ್ ಸಹಾಯದಿಂದ ಹಾರವನ್ನು ಅನಿಲ ಮೆಣಸಿನಕಾಯಿ ಅವರಿಗೆ ಹಾಕಿ ಗೌರವಿಸಲಾಯಿತು. ಇದೇ ವೇಳೆ ಕಂಬಳಿ ಹೊದಿಸಿ, ಕುರಿಯನ್ನು ಕಾಣಿಕೆಯಾಗಿ ನೀಡಿ ಸನ್ಮಾನಿಸಲಾಯಿತು.

ರೈತರು ಬೆವರು ಸುರಿಸಿ ಬೆಳೆದ ಬೆಳೆಯನ್ನು ತಮ್ಮ ನೆಚ್ಚಿನ ನಾಯಕನಿಗೆ ವಿನೂತನವಾಗಿ ಅರ್ಪಿಸುವ ಮೂಲಕ ಗೌರವ ಸಲ್ಲಿಸುವ ಉದ್ದೇಶದಿಂದ ಅಭಿಮಾನಿ ಬಳಗದ ವಸಂತ ಪಡಗದ, ಸಿದ್ದು ಪಲ್ಲೇದ, ರಾಘವೇಂದ್ರ ಯಳವತ್ತಿ, ಮುತ್ತಣ್ಣ ಗದಗಿನ, ಇರ್ಷಾದ್ ಮಾನ್ವಿ, ಪ್ರವೀಣ ಕರಬಿಷ್ಟಿ, ಮೋಹನ ವರವಿ, ಪರಮೇಶ ನಾಯಕ, ಶರಣಪ್ಪ ಚಿಂಚಲಿ, ಬಸವರಾಜ ಕುರಿ, ಬಾಬು ಯಲಿಗಾರ್, ಬಸವರಾಜ ಕೋರಿ, ಚಂದ್ರು ಗುಡ್ಡಿಮಠ, ಸತ್ಯನಾರಾಯಣ ಘೋಡಕೆ, ರಾಮು ವಾಲ್ಮೀಕಿ, ಪ್ರವೀಣ ಅಂದೇಲಿ, ಬಸು ಪೊಲೀಸಪಾಟೀಲ, ಸಂಗು ಚಿತ್ತರಗಿ ಸೇರಿದಂತೆ ಹಲವರು ಬೃಹತ್ ಹಾರ ಅರ್ಪಿಸಿದರು.

ಈ ಸಂದರ್ಭದಲ್ಲಿ ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಅಕ್ರಮ ಮಣ್ಣು ಗಣಿಗಾರಿಕೆ ಆರೋಪ: ಅಧಿಕಾರಿಗಳ ಭೇಟಿ

**ವಿಜಯಸಾಕ್ಷಿ ಸುದ್ದಿ, ಗದಗ**

ಅಕ್ರಮ ಮಣ್ಣು ಗಣಿಗಾರಿಕೆ ನಡೆಯುತ್ತಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಕಂದಾಯ ಹಾಗೂ ಗಣಿ ಇಲಾಖೆಯ ಅಧಿಕಾರಿಗಳ ತಂಡ ನಾಗಾವಿ, ಕಳಸಾಪುರ ಹಾಗೂ ಶಿರುಂದ ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು.

ಉಪ ವಿಭಾಗಾಧಿಕಾರಿ ಗಂಗಪ್ಪ, ಕಂದಾಯ ನಿರೀಕ್ಷಕ ಅರುಣಗೌಡ ಮಂಟೂರ, ಡಿಎಂಜಿ ಇಲಾಖೆ ಅಧಿಕಾರಿ ರಕ್ಷಿತ್, ಗ್ರಾಮ ಆಡಳಿತಾಧಿಕಾರಿ ಮಹೇಶ್ ಪೊಲೀಸ್ ಪಾಟೀಲ ಸೇರಿದಂತೆ ಅಧಿಕಾರಿಗಳು ಗ್ರಾಮಗಳಿಗೆ ತೆರಳಿ ಅಕ್ರಮ ಮಣ್ಣು ಗಣಿಗಾರಿಕೆ ನಡೆಯುತ್ತಿದೆ ಎನ್ನಲಾದ ಸ್ಥಳಗಳನ್ನು ಪರಿಶೀಲಿಸಿದರು.

ಮಣ್ಣು ಗಣಿಗಾರಿಕೆಗೆ ಸಂಬಂಧಿಸಿದಂತೆ ಸ್ಥಳದಲ್ಲಿನ ಪರಿಸ್ಥಿತಿ ಹಾಗೂ ಚಟುವಟಿಕೆಗಳ ಕುರಿತು ಅಧಿಕಾರಿಗಳು ಮಾಹಿತಿ ಪಡೆದುಕೊಂಡರು. ಆರೋಪಗಳ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಮುಂದಿನ ಕ್ರಮಗಳ ಕುರಿತು ಪರಿಶೀಲನೆ ನಡೆಸಲಾಯಿತು.



# ಗೋವಾ ವಿಧಾನಸಭಾ ರಜತ ಮಹೋತ್ಸವದಲ್ಲಿ ಜಿ.ಎಸ್. ಪಾಟೀಲ



**ವಿಜಯಸಾಕ್ಷಿ ಸುದ್ದಿ, ಗದಗ**

ಗೋವಾ ವಿಧಾನಸಭೆಯ ನೂತನ ಕಟ್ಟಡ ನಿರ್ಮಾಣಗೊಂಡು 25 ವರ್ಷಗಳು ಪೂರ್ಣಗೊಂಡ ಹಿನ್ನೆಲೆಯಲ್ಲಿ ಬುಧವಾರ ನಡೆದ ರಜತ ಮಹೋತ್ಸವ ಸಮಾರಂಭದಲ್ಲಿ ಕರ್ನಾಟಕ ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲ ಅವರು ವಿಶೇಷ ಆಹ್ವಾನಿತ ಅತಿಥಿಯಾಗಿ ಭಾಗವಹಿಸಿದರು.

ಸಮಾರಂಭಕ್ಕೆ ಆಗಮಿಸಿದ ಜಿ.ಎಸ್. ಪಾಟೀಲ ಅವರನ್ನು ಗೋವಾ ರಾಜ್ಯಪಾಲ ಪುಷ್ಪಪತಿ ಅಶೋಕ್ ಗಜಪತಿ ರಾಜು ಹಾಗೂ ಮುಖ್ಯಮಂತ್ರಿ ಡಾ. ಪ್ರಮೋದ ಸಾವಂತ್ ಅವರು ಹೂಗುಚ್ಛ ನೀಡಿ ಆತ್ಮೀಯವಾಗಿ ಬರಮಾಡಿಕೊಂಡರು. ಇದೇ ಸಂದರ್ಭದಲ್ಲಿ ಜಿ.ಎಸ್. ಪಾಟೀಲ ಅವರನ್ನು ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು.

ಗೋವಾ ವಿಧಾನಸಭಾ ಸಂಕೀರ್ಣ 25 ವರ್ಷಗಳ ಪಯಣ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ನಡೆದ ಸಮಾರಂಭದಲ್ಲಿ ವಿಧಾನಸಭಾ ಪರಂಪರೆ, ಪ್ರಜಾಪ್ರಭುತ್ವದ ಮೌಲ್ಯಗಳು ಹಾಗೂ ಜನಪ್ರತಿನಿಧಿ ಸಂಸ್ಥೆಗಳ ಮಹತ್ವ ಕುರಿತು ಚರ್ಚಿಸಲಾಯಿತು. ಜನರ ಆಶೋತ್ತರಗಳಿಗೆ ಸ್ಪಂದಿಸುವುದು ಹಾಗೂ ಪ್ರಜಾಪ್ರಭುತ್ವದ ಆಶಯಗಳನ್ನು ಮತ್ತಷ್ಟು ಬಲಪಡಿಸುವ ಅಗತ್ಯಕ್ಕೆ ಒತ್ತು ನೀಡಲಾಯಿತು.

ಕರ್ನಾಟಕ ವಿಧಾನಸಭಾಧ್ಯಕ್ಷರಾಗಿ ಜಿ.ಎಸ್. ಪಾಟೀಲ ಅವರ ಭಾಗವಹಿಸುವಿಕೆ ಕರ್ನಾಟಕ ಮತ್ತು ಗೋವಾ ನಡುವಿನ ಸೌಹಾರ್ದತೆ ಹಾಗೂ ಪರಸ್ಪರ ಬಾಂಧವ್ಯಕ್ಕೆ ಮತ್ತಷ್ಟು ಮೆರುಗು ನೀಡಿತು. ಉಭಯ ರಾಜ್ಯಗಳ ವಿಧಾನಸಭೆಗಳ ನಡುವಿನ ಅನುಭವ ವಿನಿಮಯ ಹಾಗೂ ಉತ್ತಮ ಸಂಸದೀಯ ಪರಂಪರೆಗಳನ್ನು ಬೆಳೆಸಲು ಇಂತಹ ಕಾರ್ಯಕ್ರಮಗಳು ಮಹತ್ವದ ವೇದಿಕೆಯಾಗಿವೆ.

> ಇಂತಹ ರಾಷ್ಟ್ರೀಯ ಮಟ್ಟದ ಸಂಸದೀಯ ಸಮಾರಂಭದಲ್ಲಿ ಕರ್ನಾಟಕದ ವಿಧಾನಸಭಾಧ್ಯಕ್ಷರಾಗಿ ಭಾಗವಹಿಸಿರುವುದು ರಾಜ್ಯಕ್ಕೆ ಗೌರವದ ಕ್ಷಣ. ಉಭಯ ರಾಜ್ಯಗಳ ಶಾಸನ ಸಭೆಗಳ ನಡುವಿನ ಉತ್ತಮ ಸಂಸದೀಯ ಅನುಭವಗಳ ವಿನಿಮಯಕ್ಕೆ ಇಂತಹ ವೇದಿಕೆಗಳು ಸಹಕಾರಿಯಾಗಲಿವೆ.
>
> – ಜಿ.ಎಸ್. ಪಾಟೀಲ, ಕರ್ನಾಟಕ ವಿಧಾನಸಭಾಧ್ಯಕ್ಷ

ಸಮಾರಂಭದಲ್ಲಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಗೋವಾ ರಾಜ್ಯಪಾಲ ಪುಷ್ಪಪತಿ ಅಶೋಕ್ ಗಜಪತಿ ರಾಜು, ಮುಖ್ಯಮಂತ್ರಿ ಡಾ. ಪ್ರಮೋದ ಸಾವಂತ್, ವಿಧಾನಸಭಾ ಸದಸ್ಯ ಮಾವಿನ್ ಗುಡಿನ್ಹೊ, ವಿರೋಧ ಪಕ್ಷದ ನಾಯಕ ಯುರಿ ಅಲೆಮಾವ್ ಸೇರಿದಂತೆ ಗೋವಾ ವಿಧಾನಸಭೆಯ ಸದಸ್ಯರು, ಗಣ್ಯರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

# ಸೋಲು-ಗೆಲುವಿಗಿಂತ ಕ್ರೀಡಾ ಮನೋಭಾವ ಮುಖ್ಯ: ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

## ಕ್ರೀಡೆಯಿಂದ ಮಾನಸಿಕ ಒತ್ತಡಕ್ಕೆ ಮುಕ್ತಿ

**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳು ಓದು, ಬರವಣಿಗೆ ಹಾಗೂ ಮನೆಕೆಲಸಗಳಿಗೆ ಮಾತ್ರ ಸೀಮಿತವಾಗದೆ ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಇದರಿಂದ ಮಾನಸಿಕ ಒತ್ತಡ ಕಡಿಮೆಯಾಗುವುದರ ಜೊತೆಗೆ ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಸಿ ಸರ್ವಾಂಗೀಣ ವಿಕಾಸ ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.



ಗದಗ-ಬೆಟಗೇರಿ ನಗರದ ಲೊಯಲಾ ಪ್ರಾಥಮಿಕ ಹಾಗೂ ಪ್ರೌಢಶಾಲೆ ಆವರಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ 2026-27ನೇ ಸಾಲಿನ ಬೆಳಗಾವಿ ವಿಭಾಗ ಮಟ್ಟದ 14 ಮತ್ತು 17 ವಯೋಮಿತಿಯ ಬಾಲಕ-ಬಾಲಕಿಯರ ಬಾಸ್ಕೆಟ್ ಬಾಲ್ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ವೈಯಕ್ತಿಕ ಆಟಗಳಿಗಿಂತ ತಂಡದ ಆಟಗಳು ಹೆಚ್ಚು ಸವಾಲಿನದ್ದಾಗಿರುತ್ತವೆ. ತಂಡದ ಆಟದಲ್ಲಿ ಎಲ್ಲರೂ ಒಂದಾಗಿ, ಪರಸ್ಪರ ಸಾಮರಸ್ಯದಿಂದ ಆಡುವುದು ಹಾಗೂ ಒಗ್ಗಟ್ಟಿನಿಂದ ನಿರ್ಧಾರ ಕೈಗೊಳ್ಳುವುದು ಮುಖ್ಯ. ಇಂತಹ ಕ್ರೀಡೆಗಳು ವಿದ್ಯಾರ್ಥಿಗಳಲ್ಲಿ ತಂಡದ ಮನೋಭಾವ ಮತ್ತು ಸಹಕಾರದ ಗುಣ ಬೆಳೆಸುತ್ತವೆ ಎಂದರು.

ಕ್ರೀಡೆಯಲ್ಲಿ ಗೆಲುವು ಅಥವಾ ಸೋಲು ಒಂದು ಘಟನೆಯಷ್ಟೇ. ಪಂದ್ಯಾವಳಿಯಲ್ಲಿ ಭಾಗವಹಿಸುವ ಪ್ರಕ್ರಿಯೆ ಹಾಗೂ ಕ್ರೀಡಾ ಮನೋಭಾವ ಅತ್ಯಂತ ಮುಖ್ಯ. ಸೋತ ತಕ್ಷಣ ಕ್ರೀಡಾಪಟುಗಳು ನಿರಾಶರಾಗಬಾರದು. ಆಯಾ ದಿನದ ಪ್ರದರ್ಶನ ಗೆಲುವನ್ನು ನಿರ್ಧರಿಸುತ್ತದೆ ಹೊರತು ಕ್ರೀಡಾಪಟುವಿನ ಸಂಪೂರ್ಣ ಪ್ರತಿಭೆಯನ್ನಲ್ಲ. ಕ್ರೀಡೆಯಲ್ಲಿ ಸದಾ ಸುಧಾರಣೆಗೆ ಅವಕಾಶವಿದ್ದು, ಪ್ರತಿಯೊಂದು ಪಂದ್ಯವೂ ಹೊಸ ಅನುಭವ ನೀಡುತ್ತದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಿದರು.

ಕ್ರೀಡಾಕೂಟ ಆಯೋಜಿಸಿರುವ ಸಂಸ್ಥೆ ಹಾಗೂ ಶಾಲಾ ಶಿಕ್ಷಣ ಇಲಾಖೆಯ ವ್ಯವಸ್ಥೆಯನ್ನು ಶ್ಲಾಘಿಸಿದ ಅವರು, ಕ್ರೀಡಾಪಟುಗಳು ಮುಕ್ತ ಮನಸ್ಸಿನಿಂದ ಆಟವನ್ನು ಆನಂದಿಸಿ ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸುವಂತೆ ಹಾರೈಸಿದರು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಮಕ್ಕಳ ಸರ್ವಾಂಗೀಣ ವಿಕಾಸಕ್ಕೆ ಶಿಕ್ಷಣದ ಜತೆಗೆ ಕ್ರೀಡೆಯೂ ಅತ್ಯಂತ ಅಗತ್ಯ. ಕ್ರೀಡಾ ಚಟುವಟಿಕೆಗಳು ಮಕ್ಕಳಲ್ಲಿ ಶಿಸ್ತು, ಸಮಯ ಪಾಲನೆ, ಸಮನ್ವಯತೆ, ಸಕ್ರಿಯ ಭಾಗವಹಿಸುವಿಕೆ ಹಾಗೂ ಸೋಲನ್ನು ಮೆಟ್ಟಿ ನಿಲ್ಲುವ ಆತ್ಮವಿಶ್ವಾಸವನ್ನು ಬೆಳೆಸುತ್ತವೆ ಎಂದರು.

ಕ್ರೀಡೆಯಲ್ಲಿ ತೊಡಗಿಕೊಳ್ಳುವುದರಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿಯಾಗುವುದರ ಜತೆಗೆ ದುಶ್ಚಟಗಳಿಂದ ದೂರವಿರಲು ಸಾಧ್ಯವಾಗುತ್ತದೆ. ಕ್ರೀಡೆಯು ನಿಯಮಬದ್ಧ ಶಿಸ್ತು ಮತ್ತು ಸಮಯ ಪ್ರಜ್ಞೆಯನ್ನು ಕಲಿಸುತ್ತದೆ. ಜೀವನದಲ್ಲಿ ಎದುರಾಗುವ ಸೋಲಿನಿಂದ ಹೊರಬಂದು ಮತ್ತೆ ಸಾಧನೆ ಮಾಡುವ ಆತ್ಮವಿಶ್ವಾಸವನ್ನು ನೀಡುತ್ತದೆ ಎಂದರು.

ಶಾಲೆ, ತಾಲೂಕು ಹಾಗೂ ಜಿಲ್ಲಾ ಮಟ್ಟವನ್ನು ದಾಟಿ ವಿಭಾಗ ಮಟ್ಟಕ್ಕೆ ಬಂದಿರುವ ಕ್ರೀಡಾಪಟುಗಳು ಮುಂದಿನ ದಿನಗಳಲ್ಲಿ ರಾಜ್ಯ, ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರತದ ಧ್ವಜವನ್ನು ಎತ್ತಿ ಹಿಡಿಯುವ ಮಟ್ಟಕ್ಕೆ ಬೆಳೆಯಬೇಕು. ಕ್ರೀಡಾಪಟುಗಳು ಕ್ರೀಡಾ ನಿಯಮಗಳಿಗೆ ಬದ್ಧರಾಗಿ ಸೌಹಾರ್ದಯುತವಾಗಿ ಪಂದ್ಯಗಳಲ್ಲಿ ಭಾಗವಹಿಸಬೇಕು ಎಂದು ಆರ್.ಎಸ್. ಬುರಡಿ ಕರೆ ನೀಡಿದರು.

ಕೆಕೆಪಿಜಿ ಸಂಗೀತ ಪಾಠಶಾಲೆಯ ವಿದ್ಯಾರ್ಥಿಗಳು ರಾಷ್ಟ್ರೀಯ ಗೀತೆ ಹಾಗೂ ನಾಡಗೀತೆ ಪ್ರಸ್ತುತಪಡಿಸಿದರು. ಆರ್.ಎಸ್. ಬುರಡಿ ಸ್ವಾಗತಿಸಿದರು. ಎಂ.ಎಸ್. ಕುಚಬಾಳ ನಿರೂಪಿಸಿದರು. ಶಿವಕುಮಾರ ಕುರಿಯವರು ವಂದಿಸಿದರು.

ಈ ಸಂದರ್ಭದಲ್ಲಿ ಉಪ ವಿಭಾಗಾಧಿಕಾರಿ ಗಂಗಪ್ಪ ಎಂ., ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ, ಡಿವೈಪಿಸಿ ಎಂ.ಎಚ್. ಕಂಬಳಿ, ಅಕ್ಷರ ದಾಸೋಹ ಶಿಕ್ಷಣಾಧಿಕಾರಿ ಎಸ್.ಡಿ. ಕನವಳ್ಳಿ, ಡಿವೈಪಿಸಿ ರವಿ ಪ್ರಕಾಶ, ಡಿಪಿಓ ಗಾಯತ್ರಿದೇವಿ ಎಂ., ಬಿಇಒ ವಿ.ವಿ. ನಡುವಿನಮನಿ, ಇಒ ಎಂ.ಪಿ. ಗೊಟೂರು, ಲೊಯಲಾ ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ಸಿಸ್ಟರ್ ಲೆವಿನಾ, ಎಚ್.ಬಿ. ರಡ್ಡೇರ, ಎಂ.ಎಚ್. ಸವದತ್ತಿ, ಲೊಯಲಾ ವೆನಿಗ್ನಾ ಸೇರಿದಂತೆ ತಾಲೂಕಿನ ದೈಹಿಕ ಶಿಕ್ಷಕರು, ವಿವಿಧ ಶಾಲೆಗಳ ಕ್ರೀಡಾಪಟುಗಳು, ತರಬೇತುದಾರರು, ಶಿಕ್ಷಕರು ಹಾಗೂ ಸಂಘಟಕರು ಉಪಸ್ಥಿತರಿದ್ದರು.

### 20 ದಿನಕ್ಕೊಮ್ಮೆ ನೀರು, ರೈತರಿಗೆ ವಿದ್ಯುತ್ ಇಲ್ಲ: ವಿಜಯೇಂದ್ರ ವಾಗ್ದಾಳಿ

# ಗದಗದ ನೀರಿನ ಸಂಕಷ್ಟಕ್ಕೆ ಸರ್ಕಾರವೇ ಹೊಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗದಲ್ಲಿ 20 ದಿನಕ್ಕೊಮ್ಮೆ ಕುಡಿಯುವ ನೀರು ಪೂರೈಕೆಯಾಗುತ್ತಿದೆ. ಭೀಕರ ಬರದ ನಡುವೆಯೂ ಸರ್ಕಾರ ಮುಂಜಾಗ್ರತಾ ಕ್ರಮ ಕೈಗೊಂಡಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರಿಗೆ ಸಮರ್ಪಕ ಏಳು ಗಂಟೆ ವಿದ್ಯುತ್ ನೀಡುತ್ತಿಲ್ಲ. ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ.

ಮಳೆ ಕೊರತೆಯ ಮುನ್ಸೂಚನೆ ಇದ್ದಾಗಲೇ ಹೊರರಾಜ್ಯಗಳಿಂದ ವಿದ್ಯುತ್ ಖರೀದಿಸಬೇಕಿತ್ತು. ಆದರೆ ಸರ್ಕಾರ ಅಗತ್ಯ ಸಿದ್ಧತೆ ಮಾಡಿಕೊಂಡಿಲ್ಲ ಎಂದು ಆರೋಪಿಸಿದರು.

ಗದಗದ ನೀರಿನ ಸಮಸ್ಯೆ ಗಂಭೀರವಾಗಿದೆ ಎಂದು ಹೇಳಿದ ವಿಜಯೇಂದ್ರ, ಜಿಲ್ಲೆಯ ಹಿರಿಯ ನಾಯಕ ಎಚ್.ಕೆ. ಪಾಟೀಲರು ಜನತೆಗೆ ಉತ್ತರ ನೀಡಬೇಕು ಎಂದರು. ರೈತರಿಗೆ ಘೋಷಿಸಿರುವ ₹2,500 ನೆರವು ಇನ್ನೂ ತಲುಪಿಲ್ಲ ಎಂದು ದೂರಿದರು.

ಮೂರ್ನಾಲ್ಕು ತಿಂಗಳಿಂದ ರಸ್ತೆ ಗುಂಡಿಗಳನ್ನು ಮುಚ್ಚಿಲ್ಲ. ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿವೆ. ಮಂಗಳೂರಿನಲ್ಲಿ ₹32 ಸಾವಿರ ಕೋಟಿ ಯೋಜನೆ ಘೋಷಿಸಿದ ಬೆನ್ನಲ್ಲೇ ಹೊಸ ಘೋಷಣೆ ಮಾಡದಂತೆ ಆರ್ಥಿಕ ಇಲಾಖೆ ಮುಖ್ಯಮಂತ್ರಿಗೆ ಪತ್ರ ಬರೆದಿದೆ ಎಂದು ವಿಜಯೇಂದ್ರ ಹೇಳಿದರು.

ಸರ್ಕಾರಿ ನೌಕರರು ಹಾಗೂ ಸಾರಿಗೆ ಸಿಬ್ಬಂದಿಗೆ ವೇತನ ನೀಡುವ ವಿಚಾರದಲ್ಲೂ ಸರ್ಕಾರದ ಆರ್ಥಿಕ ಸ್ಥಿತಿಯನ್ನು ಪ್ರಶ್ನಿಸಿದ ಅವರು, ರಾಜ್ಯದಲ್ಲಿ ಆಡಳಿತ ವಿರೋಧಿ ಅಲೆ ಇದೆ ಎಂದು ಹೇಳಿದರು.

> ಗದಗದ ಜನರು 20 ದಿನಕ್ಕೊಮ್ಮೆ ನೀರು ಪಡೆಯುವ ಸ್ಥಿತಿ ಬದಲಾಗಬೇಕು. ಕುಡಿಯುವ ನೀರು ಮತ್ತು ರೈತರ ವಿದ್ಯುತ್ ಸಮಸ್ಯೆಗೆ ಸರ್ಕಾರ ತಕ್ಷಣ ಪರಿಹಾರ ಕಂಡುಕೊಳ್ಳಬೇಕು.
>
> – ಬಿ.ವೈ. ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

ಈ ಸಂದರ್ಭದಲ್ಲಿ ಶಾಸಕ ಸಿ.ಸಿ. ಪಾಟೀಲ, ರಾಜು ಕುರಡಗಿ, ಅನಿಲ ಮೆಣಸಿನಕಾಯಿ, ಉಷಾ ದಾಸರ, ಪ್ರಕಾಶ ಅಂಗಡಿ, ವಿಜಯಲಕ್ಷ್ಮೀ ಮಾನ್ವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಪದವೀಧರ-ರಿಗೆ ಮಾಧ್ಯಮ ಇಂಟರ್ನ್‌ಶಿಪ್ ಅವಕಾಶ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಪತ್ರಿಕೋದ್ಯಮದಲ್ಲಿ ಆಸಕ್ತಿ ಹೊಂದಿರುವ ಪದವಿ ಹಾಗೂ ಸ್ನಾತಕೋತ್ತರ ಪದವೀಧರ-ರಿಗೆ ಕರ್ನಾಟಕ ಮಾಧ್ಯಮ ಅಕಾಡೆಮಿ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನ್‌ಶಿಪ್ ಅವಕಾಶ ಕಲ್ಪಿಸಿದೆ. ಮಹಿಳಾ ಆಯವ್ಯಯದಡಿ ಒಟ್ಟು 20 ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತಿದ್ದು, ಆಯ್ಕೆಯಾದವರಿಗೆ ಎರಡು ತಿಂಗಳ ಇಂಟರ್ನ್‌ಶಿಪ್ ಜೊತೆಗೆ ಅಕಾಡೆಮಿ ವತಿಯಿಂದ ಸ್ಟೈಫೆಂಡ್ ನೀಡಲಾಗುತ್ತದೆ.

ಬರವಣಿಗೆಯಲ್ಲಿ ಪರಿಣತಿ ಹಾಗೂ ಪತ್ರಿಕೋದ್ಯಮದಲ್ಲಿ ಆಸಕ್ತಿ ಹೊಂದಿರುವ 2022–23, 2023–24, 2024–25 ಹಾಗೂ 2025–26ನೇ ಶೈಕ್ಷಣಿಕ ವರ್ಷಗಳಲ್ಲಿ ವಿಶ್ವವಿದ್ಯಾಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಆಯ್ಕೆಯಾದ ಅಭ್ಯರ್ಥಿಗಳಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಎರಡು ತಿಂಗಳ ಕಾಲ ಪ್ರಾಯೋಗಿಕ ತರಬೇತಿ ಪಡೆಯಲು ಅವಕಾಶ ದೊರೆಯಲಿದೆ. ಅಭ್ಯರ್ಥಿಗಳು ತಮ್ಮ ಸ್ವವಿವರದೊಂದಿಗೆ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ, ಅಗತ್ಯ ಪೂರಕ ದಾಖಲೆಗಳನ್ನು ಲಗತ್ತಿಸಿ ಗೂಗಲ್ ಫಾರ್ಮ್ ಮೂಲಕ ಅರ್ಜಿ ಸಲ್ಲಿಸಬೇಕು.

ಅಭ್ಯರ್ಥಿಗಳ ಆಯ್ಕೆಯ ಅಂತಿಮ ತೀರ್ಮಾನ ಕರ್ನಾಟಕ ಮಾಧ್ಯಮ ಅಕಾಡೆಮಿಯ ಸಮಿತಿಗೆ ಸೇ-ರಿದ್ದು, ಅರ್ಜಿ ಸಲ್ಲಿಸಲು ಅ. 23 ಕೊನೆಯ ದಿನವಾಗಿದೆ. ನಿಗದಿತ ದಿನಾಂಕದ ನಂತರ ಸಲ್ಲಿಕೆಯಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಅಯೇಶಾ ಖಾನಂ ತಿಳಿಸಿದ್ದಾರೆ.

## ನರೇಗಲ್ಲ ಪೊಲೀಸರಿಂದ 2.091 ಕೆ.ಜಿ. ಗಾಂಜಾ ಜಪ್ತಿ: ಆರೋಪಿ ಬಂಧನ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಾರ್ವಜನಿಕರಿಗೆ ಮಾರಾಟ ಮಾಡುವ ಉದ್ದೇಶದಿಂದ ಮನೆಯಲ್ಲಿ ಸಂಗ್ರಹಿಸಿಟ್ಟಿದ್ದ 2.091 ಕೆ.ಜಿ. ಗಾಂಜಾವನ್ನು ನರೇಗಲ್ಲ ಪೊಲೀಸರು ಜಪ್ತಿ ಮಾಡಿ, ಆರೋಪಿಯನ್ನು ಬಂಧಿಸಿದ್ದಾರೆ.

ಈಶ್ವರನಗರ ನಿವಾಸಿ ಬಸವರಾಜ ತಂದೆ ಕಟ್ಟಪ್ಪ ಹರಣಶಿಕಾರಿ ಬಂಧಿತ ಆರೋಪಿ. ಅ. 5ರಂದು ಬೀಟ್ ಸಿಬ್ಬಂದಿಗೆ ದೊರೆತ ಖಚಿತ ಮಾಹಿತಿಯ ಮೇರೆಗೆ ಪೊಲೀಸರು ಆರೋಪಿಯ ಮನೆ ಮೇಲೆ ದಾಳಿ ನಡೆಸಿದ್ದಾರೆ. ಈ ವೇಳೆ ಮನೆಯ ದೇವರ ಕೋಣೆಯಲ್ಲಿನ ಕಟ್ಟೆಯ ಮೇಲೆ ಬ್ರೌನ್ ಬಣ್ಣದ ಟಿಕ್‌ಟೇಪ್‌ನಿಂದ ಸುತ್ತಿದ ಪ್ಯಾಕೆಟ್ ಪತ್ತೆಯಾಗಿದೆ.

ಪ್ಯಾಕೆಟ್ ಪರಿಶೀಲಿಸಿದಾಗ ಒಣಗಿದ ಎಲೆಗಳು ಹಾಗೂ ಬೀಜಗಳಿದ್ದ ಗಾಂಜಾ ಪತ್ತೆಯಾಗಿದ್ದು, ಒಟ್ಟು 2.091 ಕೆ.ಜಿ. ತೂಕವಿತ್ತು. ಜಪ್ತಿ ಮಾಡಲಾದ ಗಾಂಜಾದ ಅಂ-ದಾಜು ಮೌಲ್ಯ ₹1,04,550 ಎಂದು ಪೊಲೀಸರು ತಿಳಿಸಿದ್ದಾರೆ.

ವಿಚಾರಣೆ ವೇಳೆ ಆರೋಪಿ ಮಹಾರಾಷ್ಟ್ರದಿಂದ ಗಾಂಜಾ ತಂದು ಸಂಗ್ರಹಿಸಿ ಮಾರಾಟ ಮಾಡುತ್ತಿದ್ದ ಬಗ್ಗೆ ಮಾಹಿತಿ ನೀಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಕುರಿತು ನರೇಗಲ್ಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪಿಎಸ್‌ಐ ಐಶ್ವರ್ಯ ನಾಗರಾಳ ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

ಇದೇ ಆರೋಪಿ ವಿರುದ್ಧ ಈ ಹಿಂದೆ ನರೇಗಲ್ಲ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ. 55/2026ರ ಪ್ರಕರಣ ದಾಖಲಾಗಿತ್ತು. ಆ ಸಂದರ್ಭದಲ್ಲಿ ಆತನಿಂದ ಅಂದಾಜು ₹33,100 ಮೌಲ್ಯದ 331 ಗ್ರಾಂ ಗಾಂಜಾ ವಶಪಡಿಸಿಕೊಳ್ಳಲಾಗಿತ್ತು ಎಂದು ನರೇಗಲ್ಲ ಠಾಣೆಯ ಪ್ರಕಟಣೆ ತಿಳಿಸಿದೆ.

### ವಿಜಯಪುರ-ತಿರುಪತಿ ರೈಲು ಸೇವೆಗೆ ವಿಶ್ವನಾಥ ಖಾನಾಪುರ ಸ್ವಾಗತ

# ತಿರುಪತಿ ದರ್ಶನದ ದಾರಿ ಮತ್ತಷ್ಟು ಸುಗಮ




**ವಿಜಯಸಾಕ್ಷಿ ಸುದ್ದಿ, ಗದಗ**

ವಿಜಯಪುರ–ತಿರುಪತಿ ನಡುವೆ ವಿಶೇಷ ರೈಲು ಸೇವೆ ಆರಂಭಿಸಿರುವ ಭಾರತೀಯ ರೈಲ್ವೆ ಇಲಾಖೆಯ ಕ್ರಮವನ್ನು ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪುರ ಸ್ವಾಗತಿಸಿದ್ದಾರೆ.

ವಿಜಯಪುರ ಹಾಗೂ ಉತ್ತರ ಕರ್ನಾಟಕದ ಪ್ರಯಾಣಿಕರ ಬಹುದಿನಗಳ ಬೇಡಿಕೆಗೆ ಸ್ಪಂದಿಸಿ ದಕ್ಷಿಣ ಮಧ್ಯ ರೈಲ್ವೆ ವತಿಯಿಂದ ಅ. 4ರಿಂದ ವಿಜಯಪುರ–ತಿರುಪತಿ ನಡುವೆ ವಿಶೇಷ ರೈಲು ಸೇವೆ ಆರಂಭಿಸಲಾಗಿದೆ.

ರೈಲು ಸಂಖ್ಯೆ 07419/07420 ನಾಲ್ಕು ಟ್ರಿಪ್‌ಗಳಲ್ಲಿ ಸಂಚರಿಸಲಿದ್ದು, ವಿಜಯಪುರ, ಬಾಗಲಕೋಟೆ, ಬಾದಾಮಿ, ಗದಗ, ಕೊಪ್ಪಳ, ಹೊಸಪೇಟೆ ಹಾಗೂ ಬಳ್ಳಾರಿ ಸೇ-ರಿದಂತೆ ಪ್ರಮುಖ ನಿಲ್ದಾಣಗಳಿಗೆ ಸಂಪರ್ಕ ಕಲ್ಪಿಸಲಿದೆ.

ಈ ರೈಲು ಗದಗ ನಗರಕ್ಕೆ ಮಧ್ಯರಾತ್ರಿ 2.58ಕ್ಕೆ ಆಗಮಿಸಲಿದ್ದು, ತಿರುಪತಿಯಿಂದ ಮರಳುವಾಗ ಮಧ್ಯರಾತ್ರಿ 3 ಗಂಟೆಗೆ ಗದಗ ತಲುಪಲಿದೆ.

ಇದರಿಂದ ಗದಗ ಜಿಲ್ಲೆಯ ಜನರು ತಿರುಪತಿ ಶ್ರೀ ವೆಂಕಟೇಶ್ವರ ಸ್ವಾಮಿಯ ದರ್ಶನಕ್ಕೆ ತೆರಳಲು ಹೆಚ್ಚಿನ ಅನುಕೂಲವಾಗಲಿದೆ ಎಂದು ವಿಶ್ವನಾಥ ಖಾನಾಪುರ ತಿಳಿಸಿದ್ದಾರೆ.

ವಿಜಯಪುರ, ಬಾಗಲಕೋಟೆ, ಗದಗ, ಕೊಪ್ಪಳ, ವಿಜಯನಗರ ಹಾಗೂ ಬಳ್ಳಾರಿ ಜಿಲ್ಲೆಗಳ ಪ್ರಯಾಣಿಕರಿಗೆ ಈ ರೈಲು ಸೇವೆ ಮಹತ್ವದ್ದಾಗಿದೆ. ಉತ್ತರ ಕರ್ನಾಟಕದ ರೈಲು ಸಂಪರ್ಕವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ ಎಂದು ಅವರು ತಿಳಿಸಿದ್ದಾರೆ.

ವಿಶೇಷ ರೈಲು ಸೇವೆ ಕಲ್ಪಿಸಿರುವ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ ಹಾಗೂ ವಿಜಯಪುರ ಲೋಕಸಭಾ ಸದಸ್ಯ ರಮೇಶ ಜಿಗಜಿಣಗಿ, ಬಾಗಲಕೋಟೆ ಲೋಕಸಭಾ ಸದಸ್ಯ ಪಿ.ಸಿ. ಗದ್ದಿಗೌಡರ, ಹಾವೇರಿ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ ಮತ್ತು ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಅವರಿಗೆ ವಿಶ್ವನಾಥ ಖಾನಾಪುರ ಕೃತಜ್ಞತೆ ಸಲ್ಲಿಸಿದ್ದಾರೆ.

> ಬಹುದಿನಗಳ ಬೇಡಿಕೆಗೆ ಸ್ಪಂದಿಸಿ ವಿಜಯಪುರ-ತಿರುಪತಿ ವಿಶೇಷ ರೈಲು ಸೇವೆ ಆರಂಭಿಸಿರುವುದು ಉತ್ತರ ಕರ್ನಾಟಕದ ಪ್ರಯಾಣಿಕರಿಗೆ ಸಂತಸದ ವಿಚಾರ. ಗದಗ ಜಿಲ್ಲೆಯ ಜನರಿಗೆ ತಿರುಪತಿ ದರ್ಶನಕ್ಕೆ ತೆರಳಲು ಇದರಿಂದ ಹೆಚ್ಚಿನ ಅನುಕೂಲವಾಗಲಿದೆ. ಭಾರತೀಯ ರೈಲ್ವೆ ಇಲಾಖೆಯ ಈ ಕ್ರಮವನ್ನು ಗದಗ ಜಿಲ್ಲಾ ವಿಕಾಸ ವೇದಿಕೆ ಪರವಾಗಿ ಸ್ವಾಗತಿಸುತ್ತೇನೆ.
>
> – ವಿಶ್ವನಾಥ ಖಾನಾಪುರ, ಅಧ್ಯಕ್ಷರು, ಗದಗ ಜಿಲ್ಲಾ ವಿಕಾಸ ವೇದಿಕೆ

### ಲಕ್ಷ್ಮೇಶ್ವರದ 12 ಸಾವಿರ ಸದಸ್ಯರ ಸಂಘಕ್ಕೆ 'ಸಾಧನೆಗೈದ ಸಂಘ' ಪ್ರಶಸ್ತಿ

# ಹಿರಿಯರ ಸೇವೆಗೆ ರಾಜ್ಯದ ಮನ್ನಣೆ



> ಈ ಪ್ರಶಸ್ತಿ ನಮ್ಮ ಸೇವೆಗೆ ಮತ್ತಷ್ಟು ಉತ್ಸಾಹ ನೀಡಿದೆ. ಹಿರಿಯರ ಹಿತ, ಆರೋಗ್ಯ ಮತ್ತು ಸುರಕ್ಷತೆಗಾಗಿ ಸಂಘದ ಸೇವಾ ಚಟುವಟಿ-ಕೆಗಳನ್ನು ಇನ್ನಷ್ಟು ವಿಸ್ತರಿಸಿ, ಹಿರಿಯರ ಬದುಕಿನಲ್ಲಿ ಆತ್ಮಸ್ಥೈರ್ಯ ಹಾಗೂ ನೆಮ್ಮದಿ ಮೂಡಿಸುವ ಕಾರ್ಯವನ್ನು ಮುಂದುವರಿಸುತ್ತೇವೆ.
>
> – ಸಿ.ಆರ್. ಲಕ್ಕುಂಡಿಮಠ, ಅಧ್ಯಕ್ಷರು

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಹಿರಿಯ ನಾಗರಿಕರ ಹಿತ, ಆರೋಗ್ಯ, ಸುರಕ್ಷತೆ ಹಾಗೂ ಸಾಮಾಜಿಕ ಬದುಕಿಗಾಗಿ ಹಲವು ವರ್ಷಗಳಿಂದ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ಕರ್ನಾಟಕ ರಾಜ್ಯ ಹಿರಿಯ ನಾಗರಿಕರು ಹಾಗೂ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದ ಗದಗ ಜಿಲ್ಲಾ ಲಕ್ಷ್ಮೇಶ್ವರ ತಾಲೂಕು ಶಾಖೆಗೆ 'ಸಾಧನೆಗೈದ ಹಿರಿಯ ನಾಗರಿಕರ ಸಂಘ' ಪ್ರಶಸ್ತಿ ಲಭಿಸಿದೆ.

ವಿಶ್ವ ಹಿರಿಯ ನಾಗ-ರಿಕರ ದಿನಾಚರಣೆ–2026ರ ಅಂಗವಾಗಿ ರಾಜ್ಯದ ವಿವಿಧ ಹಿರಿಯ ನಾಗರಿಕರ ಸಂಘ–ಸಂಸ್ಥೆಗಳ ಕಾರ್ಯಚಟುವಟಿಕೆ ಹಾಗೂ ಸಂಘಟನಾ ಸಾಧನೆಗಳನ್ನು ಪರಿಶೀಲಿಸಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಸಂಘಗಳನ್ನು ಗುರುತಿಸಿ ಈ ಪ್ರಶಸ್ತಿ ನೀಡಲಾಗಿದೆ. ಅ. 5ರಂದು ಹುಬ್ಬಳ್ಳಿಯಲ್ಲಿ ನಡೆದ ರಾಜ್ಯ ಮಟ್ಟದ ಕಾರ್ಯಕ್ರಮದಲ್ಲಿ ಸಂಘದ ಪದಾಧಿಕಾರಿಗಳು ಪ್ರಶಸ್ತಿ ಪತ್ರ ಸ್ವೀಕರಿಸಿದರು. ಕರ್ನಾಟಕ ರಾಜ್ಯ ಹಿರಿಯ ನಾಗರಿಕರು ಹಾಗೂ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದ ಪ್ರಧಾನ ಕಾರ್ಯದರ್ಶಿ ಪಿ.ಪಿ. ಗಾಯಕವಾಡ ಪ್ರಶಸ್ತಿ ಪತ್ರ ವಿತರಿಸಿದರು.

ಅವಿಭಕ್ತ ಕುಟುಂಬಗಳ ಸಂಖ್ಯೆ ಕಡಿಮೆಯಾಗುತ್ತಿರುವುದು, ಒತ್ತಡದ ಜೀವನ ಹಾಗೂ ಸಮಯದ ಅಭಾವದಿಂದ ಹಿರಿಯರ ಮೇಲಿನ ಕಾಳಜಿ ಕುಗ್ಗುತ್ತಿರುವ ಸಂದರ್ಭದಲ್ಲಿ ಲಕ್ಷ್ಮೇಶ್ವರ ತಾಲೂಕು ಶಾಖೆಯು ಹಿರಿಯರನ್ನು ಸಾಮಾಜಿಕವಾಗಿ ಸಕ್ರಿಯರನ್ನಾಗಿಸುವ ಕಾರ್ಯ ಮಾಡುತ್ತಿದೆ. ಸುಮಾರು 12 ಸಾವಿರಕ್ಕೂ ಅಧಿಕ ಸದಸ್ಯರನ್ನು ಹೊಂದಿರುವ ಸಂಘ ಕಳೆದ ಐದು ವರ್ಷಗಳಿಂದ ಹಲವು ಸಮಾಜಮುಖಿ ಚಟುವಟಿಕೆಗಳನ್ನು ನಡೆಸಿಕೊಂಡು ಬಂದಿದೆ.

ಪ್ರತಿ ತಿಂಗಳು 25ರಂದು ಆ ತಿಂಗಳಲ್ಲಿ ಜನ್ಮದಿನ ಆಚ-ರಿಸಿಕೊಳ್ಳುವ ಹಿರಿಯರನ್ನು ಒಂದೆಡೆ ಸೇರಿಸಿ ಹುಟ್ಟುಹಬ್ಬ ಆಚರಿಸುವುದು, ಉಚಿತ ಆರೋಗ್ಯ ಶಿಬಿರಗಳ ಮೂಲಕ ಕಣ್ಣು, ಹಲ್ಲು ಹಾಗೂ ಹೃದಯ ತಪಾಸಣೆ ನಡೆಸುವುದು ಸೇರಿದಂತೆ ವಿವಿಧ ಸೇವೆಗಳನ್ನು ಸಂಘ ನೀಡುತ್ತಿದೆ. ಹಿರಿಯರಿಗೆ ಅನ್ಯಾಯವಾದ ಸಂದರ್ಭಗಳಲ್ಲಿ ಅವರ ಪರವಾಗಿ ಪೊಲೀಸ್ ಠಾಣೆಯವರೆಗೆ ತೆರಳಿ ನೆರವು ನೀಡುವ ಮೂಲಕ ಪೊಲೀಸ್ ಇಲಾಖೆಯೊಂದಿಗೆ ಉತ್ತಮ ಬಾಂಧವ್ಯ ಬೆಳೆಸಿಕೊಂಡಿದೆ.

ಏಕಾಂಗಿಯಾಗಿ ವಾಸಿಸುವ ಮಹಿಳೆಯರು ಹಾಗೂ ಹಿರಿಯ ನಾಗರಿಕರ ಸುರಕ್ಷತೆ, ಕಾಳಜಿ ಮತ್ತು ವಿಶ್ವಾಸಕ್ಕೆ ಸಂಬಂಧಿಸಿದ 'ಪೊಲೀಸ್ ಇಲಾಖೆಯ ಆಸರೆ' ಯೋಜನೆಯ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರು ಹಾಗೂ ಶತಾಯುಷಿಗಳನ್ನು ಗುರುತಿಸಿ ಸನ್ಮಾನಿಸುವ ಕಾರ್ಯವೂ ನಡೆಯುತ್ತಿದೆ.

ಶಿರಹಟ್ಟಿ ಭಾಗದ ಕೊಕ್ಕರಗುಂದಿ, ಬೂದಿಹಾಳ, ಬೆಳ್ಳಟ್ಟಿ, ಕುಂದಗೋಳದ ಕಳಸ, ಸಂಕ್ಲಿಪುರ, ಸಂಶಿ ಸೇರಿದಂತೆ ಲಕ್ಷ್ಮೇಶ್ವರ ತಾಲೂಕಿನ ವಿವಿಧ ಗ್ರಾಮಗಳ ಹಿರಿಯರು ಸಂಘದ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತಿದ್ದಾರೆ. 'ಮಕ್ಕಳಿಗಾಗಿ ಆಸ್ತಿ ಮಾಡಬೇಡಿ, ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಿ' ಎಂಬ ಆಶಯದೊಂದಿಗೆ ಹಿರಿಯರು ಹಾಗೂ ಮಕ್ಕಳ ನಡುವಿನ ಬಾಂಧವ್ಯವನ್ನು ಗಟ್ಟಿಗೊಳಿಸುವ ಸಂದೇಶವನ್ನು ಸಂಘ ನೀಡುತ್ತಿದೆ. 'ಮಕ್ಕಳನ್ನು ಪ್ರೀತಿಸು, ದೇವರನ್ನು ಸ್ಮರಿಸು' ಎಂಬ ಮೌಲ್ಯಾಧಾರಿತ ಸಂದೇಶದ ಮೂಲಕ ಹಿರಿಯರ ಬದುಕಿನಲ್ಲಿ ನೆಮ್ಮದಿ ಹಾಗೂ ಸಾಮಾಜಿಕ ಸೌಹಾರ್ದ ಮೂಡಿಸುವ ಪ್ರಯತ್ನವೂ ನಡೆಯುತ್ತಿದೆ.

ಸಂಘದ ಈ ಸಾಧನೆಗೆ ಅಧ್ಯಕ್ಷರು, ಗೌರವಾಧ್ಯಕ್ಷರು, ಗೌರವ ಉಪಾಧ್ಯಕ್ಷರು, ಮಹಿಳಾ ಘಟಕದ ಪದಾಧಿಕಾರಿಗಳು ಹಾಗೂ ಸದಸ್ಯರ ನಿರಂತರ ಶ್ರಮವೇ ಕಾರಣವಾಗಿದೆ.

### ಧರ್ಮಸ್ಥಳ ಸಂಸ್ಥೆಯ ಸೇವಾ ಕಾರ್ಯಕ್ಕೆ ಗಣ್ಯರ ಮೆಚ್ಚುಗೆ

# ಸಾಮೂಹಿಕ ಸತ್ಯನಾರಾಯಣ ಪೂಜೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ತಾಲೂಕಿನ ಯಳವತ್ತಿ ಗ್ರಾಮದಲ್ಲಿ ಸೋಮವಾರ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜಾ ಕಾರ್ಯಕ್ರಮ ಭಕ್ತಿ, ಶ್ರದ್ಧೆಯಿಂದ ಜರುಗಿತು.

ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಡಾ. ಡಿ. ವೀರೇಂದ್ರ ಹೆಗ್ಗಡೆಯವರ ನೇತೃತ್ವದಲ್ಲಿ ಧರ್ಮಸ್ಥಳ ಸಂಸ್ಥೆ ಶಿಕ್ಷಣ, ಆರೋಗ್ಯ, ವ್ಯಾಪಾರ, ಕೃಷಿ ಹಾಗೂ ಉದ್ಯೋಗ ಕ್ಷೇತ್ರಗಳಲ್ಲಿ ಸರ್ಕಾರದ ಮಾದರಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಗ್ರಾಮೀಣ ಜನರ ಬದುಕನ್ನು ಹಸನಗೊಳಿಸುವ ಜತೆಗೆ ವ್ಯಸನಮುಕ್ತ ಹಾಗೂ ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಸಂಸ್ಥೆ ಶ್ರಮಿಸುತ್ತಿರುವುದು ಶ್ಲಾಘನೀಯ ಎಂದರು. ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯು ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸುತ್ತಿದೆ. ಸಂಸ್ಥೆಯ ವಿವಿಧ ಸೇವಾ ಕಾರ್ಯಗಳು ನಾಡಿನ ಸಂಪತ್ತು ವೃದ್ಧಿಗೆ ಸಹಕಾರಿಯಾಗಿವೆ. ಅದರಲ್ಲೂ ಜಲಮೂಲಗಳ ಸಂರಕ್ಷಣೆಗೆ ಸಂಸ್ಥೆ ಕೈಗೊಳ್ಳುತ್ತಿರುವ ಕಾರ್ಯ ಶ್ಲಾಘನೀಯ ಎಂದು ಹೇಳಿದರು.

ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಶಿವಪ್ರಕಾಶ ಮಹಾಜನಶೆಟ್ಟರ ಪೂಜಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ನಾವು ಮಾಡುವ ಕೆಲಸದಲ್ಲಿ ಧರ್ಮ ಇರಬೇಕು. ಧರ್ಮದಿಂದ ಮಾಡಿದ ಕಾರ್ಯ ಯಶಸ್ವಿಯಾಗುತ್ತದೆ. ಕಾಟಾಚಾರಕ್ಕೆ ಕೆಲಸ ಮಾಡದೆ ತೃಪ್ತಿಯಿಂದ ಮಾಡಿದಾಗ ಅದರಿಂದ ನಮಗೂ ಖುಷಿ ಸಿಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಸಿದ್ದಲಿಂಗಯ್ಯ ಹಿರೇಮಠ, ರಾಮಣ್ಣ ರಾಚನಗೌಡ್ರ ಅಜ್ಜನಗೌಡ್ರು, ಕೇಶವ ದೇವಾಂಗ, ರಾಜಣ್ಣ ಕುಂಬಿ, ಫಕ್ಕೀರೇಶ ಮ್ಯಾಟಣ್ಣವರ, ಮಹೇಶ ಲಮಾಣಿ, ಶಿವಣ್ಣ ಗಾಣಗೇರ ಹಾಗೂ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಯೋಜನಾಧಿಕಾರಿ ಪುನೀತ್ ಓಲೇಕಾರ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

### ಕೇಂದ್ರದ ನೆರವಿನಿಂದ ಉತ್ಪಾದಕರ ಕಂಪನಿಗಳಿಗೆ ಹೊಸ ಚೈತನ್ಯ: ಜಿ.ಬಿ. ಬೆಲ್ಲದ

# ರೈತರ ಸ್ವಾವಲಂಬನೆಗೆ ಎಫ್‌ಪಿಓಗಳೇ ಬಲ




> ಶೇರುದಾರ ರೈತರ ಸಹಕಾರ ಮತ್ತು ಸಹಭಾಗಿತ್ವವೇ ಸಂಸ್ಥೆಯ ಶಕ್ತಿ. ರೈತರ ಬೇಕು-ಬೇಡಿಕೆಗಳಿಗೆ ಸ್ಪಂದಿಸುತ್ತಾ ಸಂಸ್ಥೆಯನ್ನು ಇನ್ನಷ್ಟು ಪ್ರಗತಿಯತ್ತ ಕೊಂಡೊಯ್ಯಲು ಎಲ್ಲರ ಸಹಕಾರ ಅಗತ್ಯ.
>
> – ಜಗದೀಶ ಸಂಕನಗೌಡ್ರ, ಅಧ್ಯಕ್ಷರು

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸುಮಾರು 50 ವರ್ಷಗಳ ಹಿಂದೆ ರೈತಪರ ಚಿಂತನೆಯೊಂದಿಗೆ ಸೌಹಾರ್ದ ಸಹಕಾರಿ ಸಂಸ್ಥೆಗಳು ರಚನೆಯಾಗಿದ್ದವು. ಆದರೆ ಅವುಗಳು ನಿರೀಕ್ಷಿತ ಮಟ್ಟದಲ್ಲಿ ಮುನ್ನಡೆಯದೆ ವಿಫಲಗೊಂಡ ಹಿನ್ನೆಲೆಯಲ್ಲಿ ಇದೀಗ ಕೇಂದ್ರ ಸರ್ಕಾರ ರೈತರು ಸ್ವಾವಲಂಬಿಗಳಾಗುವ ಹಿತದೃಷ್ಟಿಯಿಂದ ರೈತ ಉತ್ಪಾದಕರ ಸಂಸ್ಥೆಗಳನ್ನು (ಎಫ್‌ಪಿಓ) ಸ್ಥಾಪಿಸಲು ಉತ್ತೇಜನ ನೀಡುತ್ತಿದ್ದು, ಹಣಕಾಸಿನ ನೆರವನ್ನೂ ಒದಗಿಸುತ್ತಿದೆ ಎಂದು ಗುರುಪಾದಪ್ಪ ಬೆಲ್ಲದ ಹೇಳಿದರು.

ನರೇಗಲ್ಲ ರೈತ ಸಮೃದ್ಧಿ ತೋಟಗಾರಿಕಾ ಉತ್ಪಾದಕ ಕಂಪನಿಯ 3ನೇ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದ ಅವರು, ರೈತ ಸಮೃದ್ಧಿ ತೋಟಗಾರಿಕಾ ಉತ್ಪಾದಕರ ಕಂಪನಿ ಕಳೆದ ಮೂರು ವರ್ಷಗಳಿಂದ ದಕ್ಷತೆ ಹಾಗೂ ರೈತಪರ ಚಿಂತನೆಯೊಂದಿಗೆ ಪ್ರಗತಿಯತ್ತ ಸಾಗುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಕಂಪನಿಯ ಪದಾಧಿಕಾ-ರಿಗಳು ಸುತ್ತಮುತ್ತಲಿನ ರೈತರ ಪ್ರಗತಿಗಾಗಿ ಹಲವು ಕಾರ್ಯಗಳಿಗೆ ಮುಂದಾಗಿದ್ದು, ನಿರಂತರ ಪ್ರಯತ್ನದ ಫಲವಾಗಿ ಸಂಸ್ಥೆ ಉತ್ತಮ ರೈತ ಉತ್ಪಾದಕರ ಕಂಪನಿಯಾಗಿ ಮುನ್ನಡೆಯುತ್ತಿದೆ. ಎಲ್ಲರ ಸಹಕಾರದಿಂದ ಆರಂಭಗೊಂಡಿರುವ ಈ ಸಂಸ್ಥೆಯ ಸಾಧಕ–ಬಾಧಕಗಳಲ್ಲಿ ಶೇರುದಾರ ರೈತರ ಸಹಭಾಗಿತ್ವ ಅತ್ಯಗತ್ಯವಾಗಿದೆ. ರೈತರು ಹೆಚ್ಚಿನ ರೀತಿಯಲ್ಲಿ ಸ್ಪಂದಿಸಿದರೆ ಸಂಸ್ಥೆಯನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲು ಸಾಧ್ಯ ಎಂದರು.

ನರೇಗಲ್ಲ ರೈತ ಸಮೃದ್ಧಿ ತೋಟಗಾರಿಕಾ ಉತ್ಪಾದಕರ ಕಂಪನಿಯ ಅಧ್ಯಕ್ಷ ಜಗದೀಶ ಸಂಕನಗೌಡ್ರ ಮಾತನಾಡಿ, ಶೇರುದಾರ ರೈತರ ಅಹವಾಲುಗಳಿಗೆ ಸ್ಪಂದಿಸಿ ಸಂವಾದ ನಡೆಸಿದರು. ರೈತರ ಸಹಕಾರ ಮತ್ತು ಸಹಭಾಗಿ-ತ್ವದಿಂದ ಸಂಸ್ಥೆ ಯಶಸ್ವಿಯಾಗಿ ಮುನ್ನಡೆಯುತ್ತಿದ್ದು, ರೈತರ ಅಗತ್ಯತೆ ಹಾಗೂ ಬೇಡಿಕೆಗಳಿಗೆ ಅನುಗುಣವಾಗಿ ಮುಂದಿನ ಹೆಜ್ಜೆ ಇಟ್ಟು ಇನ್ನಷ್ಟು ಪ್ರಗತಿ ಸಾಧಿಸುವ ಗುರಿ ಹೊಂದಲಾಗಿದೆ ಎಂದರು.

ವೇದಿಕೆಯಲ್ಲಿ ಡಾ. ಆರ್. ಕೆ. ಗಚ್ಚಿನಮಠ ಹಾಗೂ ಬಾಳಪ್ಪ ಸೋಮಗೊಂಡ ಉಪಸ್ಥಿತರಿದ್ದರು. ಬಸವರಾಜ ವಂಕಲಕುಂಟಿ, ಸಿದ್ದಪ್ಪ ರಾಗಿ, ಉಮೇಶಗೌಡ ಪಾಟೀಲ, ಶೇಖರಗೌಡ ಪಾಟೀಲ, ಶಿವಪ್ಪ ಗೋಡಿ, ಸುರೇಶ ಬಾಗಲಿ, ರಾಜು ವಂಕಲಕುಂಟಿ, ಶರಣಪ್ಪ ಹಕ್ಕಿ ಸೇರಿದಂತೆ ಹಲವರು ರೈತರು ಉಪಸ್ಥಿತರಿದ್ದರು. ನಿರ್ದೇಶಕ ಮಂಡಳಿಯ ಚನಬಸಪ್ಪ ಕುಷ್ಟಗಿ ಸ್ವಾಗತಿಸಿದರು. ಈಶ್ವರ ಬೆಟಗೇರಿ ನಿರೂಪಿಸಿದರು. ರವಿ ಮ್ಯಾಗೇರಿ ವಂದಿಸಿದರು.

### ಸ್ಟಿಂಗ್ ಏಜೆನ್ಸಿಗಳ ವಿವರ ಬಹಿರಂಗಪಡಿಸಲು ವಿಜಯೇಂದ್ರ ಒತ್ತಾಯ

# ಸ್ಟಿಂಗ್ ಪರಂಪರೆ ಯಾರದ್ದು?

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಸ್ಟಿಂಗ್ ಆಪರೇಷನ್ ಮಾಡಿಸಿ ಬ್ಲ್ಯಾಕ್‌ಮೇಲ್ ಮಾಡುವ ಪರಂಪರೆ ಯಾರದ್ದು ಎಂಬುದನ್ನು ಕಾಂಗ್ರೆಸ್‌ನ ಸಚಿವರು ಹಾಗೂ ಶಾಸಕರನ್ನೇ ಕೇಳಬೇಕು. ಈ ಸ್ಟಿಂಗ್ ಪರಂಪರೆ ಕುರಿತು ಮಾಜಿ ಸಚಿವ, ಗದಗ ಶಾಸಕ ಎಚ್. ಕೆ. ಪಾಟೀಲರನ್ನು ಕೇಳಿದರೆ ಇನ್ನಷ್ಟು ವಿವರವಾಗಿ ಹೇಳಬಹುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವ್ಯಂಗ್ಯವಾಡಿದರು. ಬುಧವಾರ ಗದಗ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇತ್ತೀಚೆಗೆ ಕ್ಯಾಬಿನೆಟ್ ಸಚಿವರೊಬ್ಬ-ರಿಗೆ ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡು, ಬಾಗಿಲು ಹಾಕಿಕೊಂಡು ಲಂಚ ವಸೂಲಿ ಮಾಡುವಂತೆ ಸಲಹೆ ನೀಡಲಾಗುತ್ತಿದೆ ಎಂಬ ಮಾಹಿತಿ ಬಂದಿದೆ ಎಂದು ಆರೋಪಿಸಿದ ವಿಜಯೇಂದ್ರ, ಸ್ಟಿಂಗ್ ಆಪರೇಷನ್ ಭಯದಿಂದಾಗಿ ಲಂಚ ಪಡೆಯಲೂ ಹೊಸ ಮಾರ್ಗ ಕಂಡುಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ. ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ಟಿಂಗ್ ಏಜೆನ್ಸಿಗಳು ಯಾವುವು ಎಂಬುದನ್ನು ಮುಖ್ಯಮಂತ್ರಿ ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು.

**ಕಮಿಷನ್ ದರ ಶೇ.75ರಿಂದ 150ಕ್ಕೆ?**

ರಾಜ್ಯದ ಪ್ರಭಾವಿ ನಾಯಕರೊಬ್ಬರು ಇತ್ತೀಚೆಗೆ ರಿಯಲ್ ಎಸ್ಟೇಟ್ ಉದ್ಯಮಿಗಳನ್ನು ಕರೆಸಿಕೊಂಡು, ಮೊಬೈಲ್ ಸ್ವಿಚ್ ಆಫ್ ಮಾಡಿಸಿ ಮಾತನಾಡಿದ್ದಾರೆ. ಇಷ್ಟು ದಿನ 75 ಪ್ರತಿಶತ ಕಮಿಷನ್ ಕೊಡುತ್ತಿದ್ದಿರಿ, ಇನ್ನು ಮುಂದೆ 150 ಪ್ರತಿಶತ ಕೊಡಬೇಕು ಎಂದು ಬೇಡಿಕೆ ಇಟ್ಟಿದ್ದಾರೆ. ಅಷ್ಟು ಮೊತ್ತ ನೀಡಲು ಸಾಧ್ಯವಿಲ್ಲ ಎಂದು ಉದ್ಯಮಿಯೊಬ್ಬರು ಹೇಳಿದಾಗ, ರಾಜ್ಯ ಬಿಟ್ಟು ತೊಲಗಿ ಎಂದು ಬೆದರಿಕೆ ಹಾಕಿದ್ದಾರೆ ಎಂಬ ಆರೋಪವೂ ಕೇಳಿಬಂದಿದೆ. ಕಮಿಷನ್ ದರವನ್ನು ಶೇ. 75ರಿಂದ ಶೇ.150ಕ್ಕೆ ಏರಿಕೆ ಮಾಡಿರುವ ಆ ಪ್ರಭಾವಿ ನಾಯಕ ಯಾರು ಎಂಬುದನ್ನೂ ಮುಖ್ಯಮಂತ್ರಿಗಳೇ ಸ್ಪಷ್ಟಪಡಿಸಬೇಕು ಎಂದರು.

### ಯತ್ನಾಳ್‌ಗೆ ತೊಂದರೆ ಕೊಡಬೇಡಿ

ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಅವರು ಬಿಜೆಪಿ ಸೇರ್ಪಡೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ವಿಜಯೇಂದ್ರ, ಯತ್ನಾಳ್ ಅವರು ಕಳೆದ ಒಂದು ತಿಂಗಳಿಂದ ಸುಮ್ಮನಿದ್ದಾರೆ. ಸದ್ಯ ಗಣೇಶ ಹಬ್ಬ ನಡೆಯುತ್ತಿದ್ದು, ಅವರಿಗೆ ತೊಂದರೆ ನೀಡುವುದು ಬೇಡ. ಹಬ್ಬ ಮುಗಿದ ಬಳಿಕ ಅವರ ಕುರಿತು ಮಾತನಾಡುತ್ತೇನೆ ಎಂದು ಮಾರ್ಮಿಕವಾಗಿ ಹೇಳಿದರು.

### ಜೆಡಿಎಸ್ ಜತೆ ಮೈತ್ರಿ ನಿರ್ಧಾರವಾಗಿಲ್ಲ

ಮುಂಬರುವ ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಚುನಾವಣೆಗಳಲ್ಲಿ ಜೆಡಿಎಸ್ ಜತೆಗಿನ ಮೈತ್ರಿ ಕುರಿತು ಇನ್ನೂ ಯಾವುದೇ ಅಂತಿಮ ತೀರ್ಮಾನ ಕೈಗೊಂಡಿಲ್ಲ. ಮೈತ್ರಿ ಕುರಿತು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರೊಂದಿಗೆ ಚರ್ಚೆ ನಡೆಸಿದ್ದೇನೆ. ಮುಂಬರುವ ವಿಧಾನಸಭಾ ಚುನಾವಣೆಯನ್ನು ಒಟ್ಟಾಗಿ ಎದುರಿಸಬೇಕೆಂಬ ಅಪೇಕ್ಷೆ ಇದ್ದರೆ, ಅದಕ್ಕೂ ಮೊದಲು ಸ್ಥಳೀಯ ಸಂಸ್ಥೆಗಳ ಚುನಾವಣೆಗಳ ಕುರಿತು ಉಭಯ ಪಕ್ಷಗಳ ನಡುವೆ ಸ್ಪಷ್ಟತೆ ಇರಬೇಕು. ಈ ಕುರಿತು ಇಬ್ಬರೂ ಮತ್ತಷ್ಟು ಚರ್ಚಿಸಿ ತೀರ್ಮಾನ ಕೈಗೊಳ್ಳಲಿದ್ದೇವೆ ಎಂದರು.

## ನಿರುದ್ಯೋಗಿ ಯುವಕ–ಯುವತಿಯರಿಂದ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ವತಿಯಿಂದ 2026–27ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ–ಯುವತಿಯರಿಗೆ ವಿವಿಧ ಸ್ವಯಂ ಉದ್ಯೋಗ ಹಾಗೂ ಆರ್ಥಿಕ ಸಹಾಯ ಯೋಜನೆಗಳಡಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾಡಳಿತ ಭವನದ 1ನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 119ರ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇ-ರಿಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 2013ರ ಹಕ್ಕುಪತ್ರದ ಫಲಾನುಭವಿಗಳಿಗೆ ನಿವೇಶನ ಹಂಚಿಕೆಗೆ ಕ್ರಮ: ಮಿಥುನಗೌಡ ಪಾಟೀಲ

# ನಿವೇಶನರಹಿತರಿಗೆ ಶೀಘ್ರ ಸ್ವಂತ ಸೂರು

**ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ಪಟ್ಟಣದಲ್ಲಿ ಈಗಾಗಲೇ ಸಾವಿರಾರು ನಿವೇಶನರಹಿತ ಕುಟುಂಬಗಳನ್ನು ಗುರುತಿಸಿ 2013ರಲ್ಲಿ ಹಕ್ಕುಪತ್ರಗಳನ್ನು ಹಂಚಿಕೆ ಮಾಡಲಾಗಿದೆ. ಹಕ್ಕುಪತ್ರ ಪಡೆದ ಫಲಾನುಭವಿಗಳಿಗೆ ಶೀಘ್ರವೇ ವಸತಿ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಪಂಚ್ ಗ್ಯಾರಂಟಿ ಸಮಿತಿಯ ತಾಲೂಕು ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಮಿಥುನಗೌಡ ಎಸ್. ಪಾಟೀಲ ಹೇಳಿದರು.



ರೋಣ ಪಟ್ಟಣದಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿಯ ರೋಣ ತಾಲೂಕು ಶಾಖೆ ಉದ್ಘಾಟನೆ ಹಾಗೂ ರಾಜ್ಯ ವಿಧಾನಸಭೆಯ ಸಭಾಧ್ಯಕ್ಷ ಜಿ. ಎಸ್. ಪಾಟೀಲ ಅವರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರೋಣ ಪಟ್ಟಣದಲ್ಲಿರುವ ಕೊಳಗೇರಿ ಪ್ರದೇಶಗಳ ವಸತಿ ಹಾಗೂ ಮೂಲಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಿ ಲಕ್ಷಾಂತರ ರೂಪಾಯಿ ಅನುದಾನದಲ್ಲಿ ಕೊಳಗೇರಿ ಪ್ರದೇಶಗಳ ಅಭಿವೃದ್ಧಿ ಕೈಗೊಳ್ಳಲಾಗಿದೆ. ನಿವೇಶನರಹಿತ ಕುಟುಂಬಗಳಿಗೆ ಸ್ವಂತ ಸೂರು ಕಲ್ಪಿಸುವ ಉದ್ದೇಶದಿಂದ ಈಗಾಗಲೇ ಹಕ್ಕುಪತ್ರಗಳನ್ನು ವಿತರಿಸಲಾಗಿದ್ದು, ಅತೀ ಶೀಘ್ರದಲ್ಲಿ ನಿವೇಶನಗಳನ್ನು ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗುವುದು ಎಂದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಪ್ರಾಸ್ತಾವಿಕವಾಗಿ ಮಾತನಾಡಿ, ಸ್ಲಂ ಸಮಿತಿಯು ಹಲವು ವರ್ಷಗಳಿಂದ ಕೊಳಗೇರಿ ನಿವಾಸಿಗಳ ಭೂಮಿ ಹಕ್ಕು, ವಸತಿ ಹಾಗೂ ಮೂಲಭೂತ ಸೌಲಭ್ಯಗಳಿಗಾಗಿ ಸಂಘಟನಾತ್ಮಕವಾಗಿ ಕೆಲಸ ಮಾಡುತ್ತ ಬಂದಿದೆ. ರೋಣ ಪಟ್ಟಣದ ಕೊಳಗೇರಿ ಪ್ರದೇಶದ ಕುಟುಂಬಗಳಿಗೆ ವಸತಿ ಹಾಗೂ ಭೂಮಿ ಹಕ್ಕು ಕಲ್ಪಿಸಲು ಹೆಚ್ಚಿನ ಆದ್ಯತೆ ನೀಡಬೇಕು. 2013ರಲ್ಲಿ ನಿವೇಶನದ ಹಕ್ಕುಪತ್ರ ಪಡೆದ ಫಲಾನುಭವಿಗಳಿಗೆ ಆದಷ್ಟು ಬೇಗ ನಿವೇಶನ ವಿತರಿಸಬೇಕು ಎಂದು ಒತ್ತಾಯಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರೋಣ ತಾಲೂಕು ಸಮಿತಿ ಅಧ್ಯಕ್ಷ ಬಸಪ್ಪ ಕುರಿ ಮಾತನಾಡಿ, ರೋಣ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಅವರು ರಾಜ್ಯ ವಿಧಾನಸಭೆಯ ಸಭಾಧ್ಯಕ್ಷರಾಗಿ ಆಯ್ಕೆಯಾಗಿರುವುದು ಕ್ಷೇತ್ರದ ಜನರಿಗೆ ಸಂತಸದ ವಿಷಯವಾಗಿದೆ. ರೋಣ ಪಟ್ಟಣದ ಸಾವಿರಾರು ಕುಟುಂಬಗಳಿಗೆ ನಿವೇಶನದ ಹಕ್ಕುಪತ್ರಗಳನ್ನು ಹಂಚಿಕೆ ಮಾಡಿ ಬಡ ಕುಟುಂಬಗಳ ಸ್ವಂತ ಸೂರಿನ ಕನಸಿಗೆ ನೆರವಾಗುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆ. ಹಕ್ಕುಪತ್ರ ಪಡೆದ ಕುಟುಂಬಗಳು ಆದಷ್ಟು ಬೇಗ ತಮ್ಮ ಸ್ವಂತ ನಿವೇಶನ ಪಡೆಯುವಂತಾಗಬೇಕು ಎಂದರು.

ಪುರಸಭೆ ಮಾಜಿ ಸದಸ್ಯ ಬಾವಾಸಾಬ ಬೆಟಗೇರಿ, ಡಿ.ಎಸ್.ಎಸ್. ಸಂಚಾಲಕ ಸಂಜಯ ದೊಡ್ಡಮನಿ, ಜಿಲ್ಲಾ ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಮುಖಂಡರಾದ ಪುಷ್ಪಾ ಬಿಜಾಪೂರ, ಶರಣಪ್ಪ ಸೂಡಿ, ರಿಜ್ವಾನ ಮುಲ್ಲಾ, ರೋಣ ತಾಲೂಕು ಸಮಿತಿ ಉಪಾಧ್ಯಕ್ಷೆ ರೆಹಮಾನಬಿ ಹುಸೇನಸಾಬ ಕೂಲಕಾರ, ಮಾಳಮ್ಮ ಮುದಿಯಪ್ಪ ಹಿರೇಮನಿ, ಕಾರ್ಯದರ್ಶಿ ಶಾಮೀದ್ ಹುಸೇನಸಾಬ ಚೌಧರಿ ಹಾಗೂ ಖಜಾಂಚಿ ಬಾಳವ್ವ ಸುರೇಶ ಗೊನ್ನಾಗಾರ ವೇದಿಕೆಯಲ್ಲಿದ್ದರು.

ಜಿಲ್ಲಾ ಸಮಿತಿ ಮುಖಂಡ ಮೌಲಾಸಾಬ ಗಚ್ಚಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ತಾಲೂಕು ಸಮಿತಿ ಪದಾಧಿಕಾರಿಗಳು ಹಾಗೂ ರೋಣ ಪಟ್ಟಣದ ನೂರಾರು ಸ್ಲಂ ನಿವಾಸಿಗಳು ಮತ್ತು ನಿವೇಶನರಹಿತ ಕುಟುಂಬಗಳ ಸದಸ್ಯರು

> ರೋಣ ಪಟ್ಟಣದ ಕೊಳಗೇರಿ ಪ್ರದೇಶದ ಕುಟುಂಬಗಳಿಗೆ ವಸತಿ ಮತ್ತು ಭೂಮಿ ಹಕ್ಕು ಕಲ್ಪಿಸುವುದು ನಮ್ಮ ಪ್ರಮುಖ ಆದ್ಯತೆಯಾಗಿದೆ. 2013ರಲ್ಲಿ ಹಕ್ಕುಪತ್ರ ಪಡೆದಿರುವ ಫಲಾನುಭವಿಗಳಿಗೆ ಆದಷ್ಟು ಬೇಗ ನಿವೇಶನ ದೊರೆಯುವಂತೆ ಕ್ರಮ ಕೈಗೊಳ್ಳಬೇಕು.
>
> – ಇಮ್ತಿಯಾಜ್ ಆರ್. ಮಾನ್ವಿ, ಅಧ್ಯಕ್ಷರು, ಗದಗ ಜಿಲ್ಲಾ ಸ್ಲಂ ಸಮಿತಿ

## ಎಂಎಲ್‌ಸಿ ಚುನಾವಣೆ: ವಿಜಯೇಂದ್ರ ಭೇಟಿ ಮಾಡಿದ ಗೋವಿಂದಗೌಡ್ರು

**ವಿಜಯಸಾಕ್ಷಿ ಸುದ್ದಿ, ಗದಗ**

ನಗರಕ್ಕೆ ಆಗಮಿಸಿದ್ದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರನ್ನು ಜೆಡಿಎಸ್ ರಾಜ್ಯ ವಕ್ತಾರ ಹಾಗೂ ಪಶ್ಚಿಮ ಪದವೀಧರ ಕ್ಷೇತ್ರದ ಗದಗ ಜಿಲ್ಲಾ ಜೆಡಿಎಸ್ ಉಸ್ತುವಾರಿ ವೆಂಕನಗೌಡ ಆರ್. ಗೋವಿಂದಗೌಡ್ರು ಭೇಟಿ ಮಾಡಿ ಮುಂಬರುವ ಚುನಾವಣೆಯ ಕುರಿತು ಸಮಾಲೋಚನೆ ನಡೆಸಿದರು.



ಗದಗ ಜಿಲ್ಲೆಯಲ್ಲಿ ತಾವು ಕೈಗೊಂಡಿರುವ ಮತದಾರರ ನೋಂದಣಿ ಕಾರ್ಯ ಹಾಗೂ ನೋಂದಾಯಿತ ಮತದಾರರೊಂದಿಗಿನ ಸಂಪರ್ಕದ ಕುರಿತು ಗೋವಿಂದಗೌಡ್ರು ಅವರು ವಿಜಯೇಂದ್ರ ಅವರಿಗೆ ಮಾಹಿತಿ ನೀಡಿದರು. ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆಯ ಸಿದ್ಧತೆ ಹಾಗೂ ಕ್ಷೇತ್ರದಲ್ಲಿ ಕೈಗೊಳ್ಳಬೇಕಾದ ಕಾರ್ಯತಂತ್ರಗಳ ಬಗ್ಗೆಯೂ ಚರ್ಚೆ ನಡೆಯಿತು. ಈ ಸಂದರ್ಭದಲ್ಲಿ ಎನ್‌ಡಿಎ ಮೈತ್ರಿಕೂಟದ ಗೆಲುವಿಗಾಗಿ ಒಗ್ಗಟ್ಟಿನಿಂದ ಶ್ರಮಿಸುವ ಕುರಿತು ವಿಜಯೇಂದ್ರ ಅವರು ಮುಖಂಡರಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರುಡಗಿ, ವಕೀಲ ಕೆ.ಪಿ. ಕೋಟಿಗೌಡ್ರ, ಶಿವರಾಜ ಹಿರೇಮನಿ ಪಾಟೀಲ, ರಾಜೇಶ್ ಮುತಗಾರ, ಜಿ.ಕೆ. ಕೊಳ್ಳಿಮಠ, ಪ್ರಫುಲ ಪುಣೇಕರ, ಬಸವರಾಜ ಅಪ್ಪಣ್ಣವರ್, ಪ್ರಮುಖರು ಉಪಸ್ಥಿತರಿದ್ದರು.

## 2023ರಲ್ಲಿ ಪ್ರಕಟವಾದ ಪುಸ್ತಕಗಳ ಪ್ರದರ್ಶನ

**ವಿಜಯಸಾಕ್ಷಿ ಸುದ್ದಿ, ಗದಗ**

2023ನೇ ಸಾಲಿನಲ್ಲಿ ಪ್ರಕಟಗೊಂಡು ರಾಜ್ಯಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಸಲ್ಲಿಕೆಯಾಗಿದ್ದ ಪುಸ್ತಕಗಳ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡಿದೆ. ಆಯ್ಕೆಯಾದ ಹಾಗೂ ಆಯ್ಕೆಯಾಗದ ಪುಸ್ತಕಗಳ ಪ್ರದರ್ಶನವನ್ನು ಬೆಂಗಳೂರಿನ ಎಂ.ಸಿ. ಬಡಾವಣೆಯಲ್ಲಿರುವ ಡಾ. ವಿಷ್ಣುವರ್ಧನ ಸ್ಮಾರಕ ಸ್ಪರ್ಧಾತ್ಮಕ ಪರೀಕ್ಷೆಗಳ ಅಧ್ಯಯನ ಕೇಂದ್ರದ ಗ್ರಂಥಾಲಯ ಸಭಾಂಗಣದಲ್ಲಿ ಅ.12ರಿಂದ ಅ.14ರವರೆಗೆ ಬೆಳಿಗ್ಗೆ 10ರಿಂದ ಸಂಜೆ 5.30ರವರೆಗೆ ಆಯೋಜಿಸಲಾಗಿದೆ.

ರಾಜ್ಯಮಟ್ಟದಲ್ಲಿ ಆಯ್ಕೆಯಾದ ಪುಸ್ತಕಗಳ ತಾತ್ಕಾಲಿಕ ಪಟ್ಟಿಯನ್ನು ರಾಜ್ಯದ ಎಲ್ಲ ಜಿಲ್ಲಾ ಹಾಗೂ ನಗರ ಕೇಂದ್ರ ಗ್ರಂಥಾಲಯಗಳ ಉಪನಿರ್ದೇಶಕರು ಮತ್ತು ಮುಖ್ಯ ಗ್ರಂಥಾಲಯಾಧಿಕಾರಿಗಳ ಕಚೇರಿಗಳಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರದರ್ಶಿಸಲಾಗುತ್ತಿದೆ. ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿಯೂ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

ರಾಜ್ಯಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಪುಸ್ತಕಗಳನ್ನು ಸಲ್ಲಿಸಿದ ಲೇಖಕರು, ಲೇಖಕ-ಪ್ರಕಾಶಕರು, ಪ್ರಕಾಶಕರು ಹಾಗೂ ಪುಸ್ತಕ ಮಾರಾಟಗಾರರಿಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಅ.12ರಿಂದ ಅ.22ರವರೆಗೆ ಸಂಜೆ 5.30ರೊಳಗೆ ಲಿಖಿತ ಮನವಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಆಕ್ಷೇಪಣೆಗಳನ್ನು ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು-560001 ವಿಳಾಸಕ್ಕೆ ಸಲ್ಲಿಸಬೇಕು.

# ಕಡಲೆ ಬೆಳೆಯಲ್ಲಿ ಅಧಿಕ ಇಳುವರಿಗೆ ಸುಧಾರಿತ ತಾಂತ್ರಿಕತೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕಡಲೆ ಬೆಳೆಯಲ್ಲಿ ಉತ್ತಮ ಇಳುವರಿ ಹಾಗೂ ಗುಣಮಟ್ಟದ ಉತ್ಪಾದನೆ ಪಡೆಯಲು ರೈತರು ಸುಧಾರಿತ ಬೇಸಾಯ ಕ್ರಮಗಳ ಜೊತೆಗೆ ಸಮಗ್ರ ಪೋಷಕಾಂಶ ಮತ್ತು ಪೀಡೆ ನಿರ್ವಹಣಾ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಸಲಹೆ ನೀಡಿದ್ದಾರೆ.

ಸುಧಾರಿತ, ರೋಗ ನಿರೋಧಕ, ಕಡಿಮೆ ಅವಧಿಯಲ್ಲಿ ಇಳುವರಿ ನೀಡುವ ಹಾಗೂ ಒತ್ತಡ ಸಹಿಷ್ಣು ತಳಿಗಳ ಪ್ರಮಾಣೀಕೃತ ಬೀಜಗಳನ್ನು ಬಳಸಬೇಕು. ಯಾಂತ್ರೀಕೃತ ಕೂರಿಗೆ ಬಿತ್ತನೆ ಅಥವಾ ಊರುಗಾಳು ಪದ್ಧತಿ ಅನುಸರಿಸಿ ಸರಿಯಾದ ಬೆಳೆ ಅಂತರ ಕಾಪಾಡಬೇಕು. ನೀರಾವರಿ ಪ್ರದೇಶದಲ್ಲಿ 30|10 ಸೆಂ.ಮೀ. ಹಾಗೂ ಒಣ ಬೇಸಾಯದಲ್ಲಿ 45 ಸೆಂ.ಮೀ. ಸಾಲಿನ ಅಂತರದಲ್ಲಿ ಬಿತ್ತನೆ ಮಾಡುವುದು ಸೂಕ್ತ.

ಬಿತ್ತನೆ ಸಂದರ್ಭದಲ್ಲಿ ಪ್ರತಿ ಎಕರೆಗೆ 8 ಕೆ.ಜಿ. ಮೈಕೋರೈಜಾ ಜೈವಿಕ ಗೊಬ್ಬರವನ್ನು 200 ಕೆ.ಜಿ. ಎರೆಹುಳು ಗೊಬ್ಬರದೊಂದಿಗೆ ಮಿಶ್ರಣ ಮಾಡಿ ಬಿತ್ತನೆ ಸಾಲಿನಲ್ಲಿ ಮಣ್ಣಿಗೆ ಸೇರಿಸಬೇಕು. ಬೀಜಗಳನ್ನು ಬಿತ್ತನೆಗೂ ಮುನ್ನ ಶಿಲೀಂಧ್ರನಾಶಕ ಹಾಗೂ ಟ್ರೈಕೋಡರ್ಮಾ, ಪಿಎಸ್‌ಬಿ ಮತ್ತು ರೈಜೋಬಿಯಂನಂತಹ ಜೈವಿಕ ಗೊಬ್ಬರಗಳಿಂದ ಬೀಜೋಪಚಾರ ಮಾಡಬೇಕು.

ಕಡಲೆ ಬೆಳೆಯ 35ರಿಂದ 40 ದಿನಗಳ ಬೆಳವಣಿಗೆ ಹಂತದಲ್ಲಿ ತಪ್ಪದೇ ಕುಡಿ ಚಿವುಟುವ ಕ್ರಮ ಕೈಗೊಳ್ಳಬೇಕು. ಸಾವಯವ ಗೊಬ್ಬರದ ಜೊತೆಗೆ ಶಿಫಾರಸು ಮಾಡಿದ ರಸಗೊಬ್ಬರಗಳನ್ನು ಬಳಸಿ ಸಮಗ್ರ ಪೋಷಕಾಂಶ ನಿರ್ವಹಣೆ ಮಾಡಬೇಕು. ಸೂಕ್ಷ್ಮ ಪೋಷಕಾಂಶಗಳ ಬಳಕೆಗೂ ಆದ್ಯತೆ ನೀಡಬೇಕು. ನ್ಯಾನೋ ಯೂರಿಯಾ ಸೇರಿದಂತೆ ಶಿಫಾರಸು ಮಾಡಲಾದ ಬಳಸಬೇಕು. ಬರ ನಿರೋಧಕತೆ ಹೆಚ್ಚಿಸಲು ಬಿತ್ತನೆಗೂ ಮುನ್ನ ಬೀಜಗಳನ್ನು ಶೇ.2ರ ಕ್ಯಾಲ್ಸಿಯಂ ಕ್ಲೋರೈಡ್ ದ್ರಾವಣದಲ್ಲಿ 30 ನಿಮಿಷ ಅಥವಾ ಶೇ.25ರ ಗೋಮೂತ್ರದಲ್ಲಿ 8 ಗಂಟೆಗಳ ಕಾಲ ನೆನೆಸಿ, ಕನಿಷ್ಠ 7 ಗಂಟೆಗಳ ಕಾಲ ನೆರಳಿನಲ್ಲಿ ಒಣಗಿಸಿ ಕಠಿಣಗೊಳಿಸಬೇಕು. ಬಳಿಕ ರೈಜೋಬಿಯಂ ಹಾಗೂ ರಂಜಕ ಕರಗಿಸುವ ಅಣುಜೀವಿಗಳಿಂದ ಬೀಜೋಪಚಾರ ಮಾಡಿ ಬಿತ್ತನೆ ಮಾಡಬೇಕು.

ಪ್ರತಿ ಕೆ.ಜಿ. ಬೀಜಕ್ಕೆ 4 ಮಿ.ಲೀ. ಜೈವಿಕ ಗೊಬ್ಬರ ಅಣುಜೀವಿ ಮಿಶ್ರಣದಿಂದ ಬೀಜೋಪಚಾರ ಮಾಡಬೇಕು. ಬಿತ್ತನೆ ಮಾಡಿದ 30 ಮತ್ತು 45 ದಿನಗಳ ನಂತರ ಒಂದು ಲೀಟರ್ ನೀರಿಗೆ 40 ಮಿ.ಲೀ. ಅಣುಜೀವಿ ಮಿಶ್ರಣವನ್ನು ಬೆರೆಸಿ ಸಿಂಪಡಿಸಬೇಕು.

ಬೆಳೆಯ ಸಂದಿಗ್ಧ ಹಂತಗಳಲ್ಲಿ ಅಗತ್ಯಕ್ಕೆ ಅನುಗುಣವಾಗಿ ನೀರು ಒದಗಿಸಿ ಮಣ್ಣಿನಲ್ಲಿ ಬೇವಿನ ಬೀಜದ ಕಷಾಯ ಸಿಂಪರಣೆ, ಲಿಂಗಾಕರ್ಷಕ ಬಲೆಗಳ ಬಳಕೆ ಸೇರಿದಂತೆ ಸಮಗ್ರ ಪೀಡೆ ನಿರ್ವಹಣಾ ಕ್ರಮಗಳನ್ನು ಅನುಸರಿಸುವಂತೆ ರೈತರಿಗೆ ಸಲಹೆ ನೀಡಲಾಗಿದೆ.

### ಲಕ್ಕುಂಡಿಯಲ್ಲಿ 1995-96ನೇ ಸಾಲಿನ ವಿದ್ಯಾರ್ಥಿಗಳಿಂದ ಗುರುವಂದನಾ, ಸ್ನೇಹ ಸಮ್ಮಿಲನ

# 25 ವರ್ಷಗಳ ಬಳಿಕ ಒಂದಾದ ಗುರು-ಶಿಷ್ಯರು



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಭಾರತೀಯ ಸಂಸ್ಕೃತಿಯಲ್ಲಿ ಗುರುವಿಗೆ ಅತ್ಯುನ್ನತ ಸ್ಥಾನವಿದ್ದು, ಗುರು-ಶಿಷ್ಯ ಪರಂಪರೆಯಿಂದಲೇ ಭಾರತ ಜಗದ್ಗುರುವಾಗಿದೆ ಎಂದು ಹೊಸಳ್ಳಿ ಗ್ರಾಮದ ಬೂದೀಶ್ವರ ಸಂಸ್ಥಾನ ಮಠದ ಬೂದೀಶ್ವರ ಸ್ವಾಮೀಜಿ ಹೇಳಿದರು.

ಲಕ್ಕುಂಡಿಯ ಬೂದಿ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ 1995-96ನೇ ಸಾಲಿನ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳು ಆಯೋಜಿಸಿದ್ದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕ ತಾಯಿಯಂತೆ ಮಗುವಿನ ಹಂತಕ್ಕೆ ಇಳಿದು ಅಕ್ಷರ ಕಲಿಸುವ ಮೂಲಕ ಅದರ ಸರ್ವಾಂಗೀಣ ಅಭಿವೃದ್ಧಿಗೆ ಕಾರಣನಾಗುತ್ತಾನೆ. ಹೀಗಾಗಿ ಹಿಂದಿನಿಂದಲೂ ಶಾಲೆಯನ್ನು 'ಶಾಲಾ ಗುಡಿ' ಎಂದು ಕರೆಯಲಾಗುತ್ತಿದೆ. ಸಾಕ್ಷಾತ್ ದೇವರ ಸ್ವರೂಪವಾಗಿರುವ ಶಿಕ್ಷಕರನ್ನು ಗೌರವಿಸುವ ಈ ಕಾರ್ಯ ಶ್ಲಾಘನೀಯ ಎಂದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಹರ್ಲಾಪೂರದ ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಸ್ವಾಮೀಜಿ ಮಾತನಾಡಿ, ಜಾತಿ ಭೇದವಿಲ್ಲದೆ ಗುರು-ಶಿಷ್ಯ ಪರಂಪರೆಯಲ್ಲಿ ಶಿಷ್ಯರು ಗುರುವಿಗೆ ವಂದನೆ ಸಲ್ಲಿಸುವ ಸಂಪ್ರದಾಯ ಪ್ರಾಚೀನ ಕಾಲದಿಂದಲೂ ನಡೆದುಕೊಂಡು ಬಂದಿದೆ. ಅಜ್ಞಾನದ ಕತ್ತಲೆಯಿಂದ ಸುಜ್ಞಾನದ ಬೆಳಕಿನೆಡೆಗೆ ಕರೆದೊಯ್ಯುವ ಶಕ್ತಿ ಗುರುವಿನಲ್ಲಿದೆ. ಲಕ್ಕುಂಡಿಯಲ್ಲಿ ವೈಮನಸ್ಸುಗಳನ್ನು ಮರೆತು ಎಲ್ಲರೂ ಒಂದಾಗಿ ಗುರುವಿಗೆ ವಂದನೆ ಸಲ್ಲಿಸಿರುವುದು ಸಮಾಜಮುಖಿ ಕಾರ್ಯವಾಗಿದೆ ಎಂದರು.

ನಿವೃತ್ತ ಪ್ರಾಚಾರ್ಯ ಪ್ರೊ. ಕೆ.ಎಚ್. ಬೇಲೂರು ಮಾತನಾಡಿ, ತಂದೆ-ತಾಯಿ ಜೀವ ನೀಡುತ್ತಾರೆ, ಶಿಕ್ಷಕ ಜೀವನ ರೂಪಿಸುತ್ತಾನೆ. ಶಿಕ್ಷಕ ವೃತ್ತಿ ಎಲ್ಲ ವೃತ್ತಿಗಳಿಗಿಂತ ಶ್ರೇಷ್ಠವಾಗಿದ್ದು, ಮಾಜಿ ರಾಷ್ಟ್ರಪತಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರೂ ತಮ್ಮ ಶಿಕ್ಷಕರಿಗೆ ಮಹತ್ವದ ಸ್ಥಾನ ನೀಡಿದ್ದರು ಎಂದರು.

ನಿವೃತ್ತ ಪ್ರಾಚಾರ್ಯ ತೋಟಪ್ಪ ಮಾಗಳದ ಮಾತನಾಡಿ, ಲಕ್ಕುಂಡಿ ಕೇವಲ ನಾಣ್ಯಗಳನ್ನು ಟಂಕಿಸಿದ ಹಾಗೂ ದೇವಾಲಯಗಳ ತವರೂರು ಮಾತ್ರವಲ್ಲ. ಸರ್ ಸಿದ್ದಪ್ಪ ಕಂಬಳಿ ಅವರಂತಹ ಮೌಲ್ಯಯುತ ಶಿಕ್ಷಕರನ್ನು ನೀಡಿದ ಐತಿಹಾಸಿಕ ಗ್ರಾಮವೂ ಹೌದು ಎಂದರು.

ಶಿಕ್ಷಕ ವಿ.ವಿ. ಮಣ್ಣಬಸಣ್ಣವರ ಮಾತನಾಡಿದರು. ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ಗದಗ ಹೆಸ್ಕಾಂ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಎಂ.ಜೆ. ನದಾಫ ಪ್ರಾಸ್ತಾವಿಕವಾಗಿ ಮಾತನಾಡಿದರು. ಅನಿತಾ ದೇಶಪಾಂಡೆ, ಷಡಕ್ಷರಯ್ಯ ಬದ್ನಿಮಠ ಸಂಗಡಿಗರು ಪ್ರಾರ್ಥಿಸಿದರು. ಶಿಕ್ಷಕ ಶಂಭು ಅರಿಷಿಣದ ಸ್ವಾಗತಿಸಿದರು. ಸಿ.ಆರ್.ಪಿ. ಎಸ್.ಸಿ. ಹಿರೇಮಠ ನಿರೂಪಿಸಿದರು. ಶಿಕ್ಷಕ ಮಲ್ಲೇಶ ಹಣವಾಳ ವಂದಿಸಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಯು.ಎಸ್. ಬೆಂತೂರು, ವಿ.ಎಸ್. ಕಾಳಗಿ, ವಿ.ಐ. ಬಡಿಗೇರ, ಎಂ.ಎಲ್. ಹೊಸಮನಿ, ಡಿ.ಎಚ್. ಮಾದರ, ಎಸ್.ಸಿ. ಛಬ್ಬೇರಭಾವಿ, ಪಿ.ಎಸ್. ಕೊರಡೂರು, ಎಸ್.ಎಸ್. ಗಾಣದಾಳಮಠ, ಐ.ಎಸ್. ಮಟ್ಟಿ, ಎಫ್.ಎಂ. ಜಾಲಿಹಾಳ, ಆರ್.ಎಸ್. ಆಲೂರು, ಎಸ್.ಬಿ. ಕರಬಸನಗೌಡ್ರ, ವಿ.ವಿ. ಮಣ್ಣಬಸಣ್ಣವರ, ಎನ್.ಕೆ. ಅಂಬಕ್ಕಿ, ಎಸ್.ಎಲ್. ಪತ್ತಾರ, ಎಸ್.ಬಿ. ಪಾಟೀಲ ಹಾಗೂ ಶ್ರೀಶೈಲ ಕತ್ತಿ ಅವರನ್ನು ಬೂದೀಶ್ವರ ಶ್ರೀಗಳು ಹಾಗೂ ಡಾ. ಕೊಟ್ಟೂರೇಶ್ವರ ಶ್ರೀಗಳೊಂದಿಗೆ ರಾಷ್ಟ್ರೀಯ ಹೆದ್ದಾರಿಯಿಂದ ಬೂದೀಶ್ವರ ದೇವಸ್ಥಾನದವರೆಗೆ ಹೂವಿನ ಸುರಿಮಳೆಯೊಂದಿಗೆ ಸ್ವಾಗತಿಸಲಾಯಿತು.

ಸುಮಾರು 25-30 ವರ್ಷಗಳ ಬಳಿಕ ತಮ್ಮ ಶಿಕ್ಷಕರನ್ನು ಕಂಡ ವಿದ್ಯಾರ್ಥಿಗಳು ಭಾವೋದ್ವೇಗಕ್ಕೆ ಒಳಗಾಗಿ ಕಣ್ತುಂಬಿಕೊಂಡರು. 80ಕ್ಕೂ ಅಧಿಕ ವಿದ್ಯಾರ್ಥಿಗಳು ಶಿಕ್ಷಕರಿಗೆ ಶಾಲು, ಹೂವಿನ ಹಾರ, ಹಣ್ಣು ಹಾಗೂ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಿದರು. ಬಳಿಕ ಶ್ರದ್ಧಾ ಭಕ್ತಿಯಿಂದ ಶಿಕ್ಷಕರ ಪಾದಕ್ಕೆರಗಿ ಆಶೀರ್ವಾದ ಪಡೆದರು.

> ಪ್ರಾಥಮಿಕ ಶಾಲಾ ಹಂತದಲ್ಲಿಯೇ ನಮ್ಮ ತಪ್ಪುಗಳನ್ನು ತಿದ್ದಿ ಭವಿಷ್ಯ ರೂಪಿಸಿದ ಶಿಕ್ಷಕರನ್ನು ಗೌರವಿಸುವ ಈ ಕಾರ್ಯ ನಿಜಕ್ಕೂ ತೃಪ್ತಿ ತಂದಿದೆ. ಗುರುವಂದನೆ ಸಲ್ಲಿಸಲು ಸಹಾಯ-ಸಹಕಾರ ನೀಡಿದ ಸರ್ವ ಸ್ನೇಹ ಬಳಗಕ್ಕೆ ಅಭಿನಂದನೆಗಳು.
>
> – ಎಂ.ಜೆ. ನದಾಫ್, ಎಸ್.ಎಸ್. ಛಬ್ಬೇರಭಾವಿ, ಈರಮ್ಮ ಹೊನ್ನುಂಗರದ ಹಾಗೂ ಚನ್ನಮ್ಮ ಕಂಠಿ, ವಿದ್ಯಾರ್ಥಿ ಮುಖಂಡರು

### ಪ್ರಾಣಿಗಳ ಕಡಿತಕ್ಕೆ ತಕ್ಷಣ ಚಿಕಿತ್ಸೆ ಪಡೆಯಿರಿ: ಡಾ.ಪ್ರವೀಣ್

# ರೇಬಿಸ್ ಬಗ್ಗೆ ನಿರ್ಲಕ್ಷ್ಯ ಬೇಡ

**ವಿಜಯಸಾಕ್ಷಿ ಸುದ್ದಿ, ಗದಗ**

ರೇಬಿಸ್ ಹಾಗೂ ಹೃದಯ ಸಂಬಂಧಿ ಕಾಯಿಲೆಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದ ವಿಶ್ವ ರೇಬಿಸ್ ದಿನಾಚರಣೆ ಹಾಗೂ ವಿಶ್ವ ಹೃದಯ ದಿನಾಚರಣೆಯನ್ನು ಗದಗ ಮೃಗಾಲಯದ ಆವರಣದಲ್ಲಿ ಆಚರಿಸಲಾಯಿತು.




ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಜಿಲ್ಲಾ ಸಮೀಕ್ಷಣಾ ಘಟಕ, ಜಿಲ್ಲಾ ಮಾಹಿತಿ ಶಿಕ್ಷಣ ಮತ್ತು ಸಂವಹನ ವಿಭಾಗ, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ, ಪ್ರಾಥಮಿಕ ಆರೋಗ್ಯ ಕೇಂದ್ರ ಹುಲಕೋಟಿ ಹಾಗೂ ವಲಯ ಅರಣ್ಯಾಧಿಕಾರಿಗಳ ಕಚೇರಿ, ಮೃಗಾಲಯ ಇವರ ಸಂಯುಕ್ತ ಆಶ್ರಯದಲ್ಲಿ ಕಾರ್ಯಕ್ರಮ ನಡೆಯಿತು.

ಜಿಲ್ಲಾ ಎಪಿಡೆಮಿಯಾಲಜಿಸ್ಟ್ ಡಾ. ಪ್ರವೀಣ ನಿಡಗುಂದಿ ಮಾತನಾಡಿ, ರೇಬಿಸ್ ವೈರಾಣುವಿನಿಂದ ಹರಡುವ ಮಾರಕ ಕಾಯಿಲೆಯಾಗಿದ್ದು, ಜಾಗೃತಿ ಹಾಗೂ ಸೂಕ್ತ ಮುನ್ನೆಚ್ಚರಿಕೆ ಮೂಲಕ ಸಂಪೂರ್ಣವಾಗಿ ತಡೆಗಟ್ಟಬಹುದು.

ರೇಬಿಸ್ ಲಸಿಕೆಯ ಬಗ್ಗೆ ಇರುವ ಭಯವನ್ನು ಬಿಟ್ಟು, ಪ್ರಾಣಿಗಳ ಕಡಿತ ಅಥವಾ ಪರಚುವಿಕೆ ಸಂಭವಿಸಿದಾಗ ತಕ್ಷಣ ಲಸಿಕೆ ಪಡೆಯಬೇಕು ಎಂದರು.

ನಾಯಿ, ಬೆಕ್ಕು ಸೇರಿದಂತೆ ಯಾವುದೇ ಪ್ರಾಣಿ ಕಚ್ಚಿದಾಗ ಅಥವಾ ಪರಚಿದಾಗ ಗಾಯವನ್ನು ಕನಿಷ್ಠ 15 ನಿಮಿಷಗಳ ಕಾಲ ಹರಿಯುವ ನೀರು ಹಾಗೂ ಸಾಬೂನಿನಿಂದ ಚೆನ್ನಾಗಿ ತೊಳೆದು, ಬಳಿಕ ನಂಜು ನಿರೋಧಕ ದ್ರಾವಣ ಹಚ್ಚಿ ಸಮೀಪದ ಸರ್ಕಾರಿ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆಯಬೇಕು.

ಗಾಯಕ್ಕೆ ಅರಿಶಿನ, ಎಣ್ಣೆ, ಸುಣ್ಣ, ಕಾಫಿಪುಡಿ ಹಚ್ಚುವುದು, ನಾಟಿ ಔಷಧ ತೆಗೆದುಕೊಳ್ಳುವುದು ಅಥವಾ ಗಾಯ ಚಿಕ್ಕದಾಗಿದೆ ಎಂದು ಲಸಿಕೆ ಪಡೆಯದೆ ನಿರ್ಲಕ್ಷಿಸುವುದು ಮಾಡಬಾರದು ಎಂದು ತಿಳಿಸಿದರು.

ರೇಬಿಸ್ ಸೋಂಕು ಹರಡುವ ಪ್ರಕರಣಗಳಲ್ಲಿ ನಾಯಿಗಳಿಂದ ಶೇ.97, ಬೆಕ್ಕುಗಳಿಂದ ಶೇ.2 ಹಾಗೂ ಇತರ ಪ್ರಾಣಿಗಳಿಂದ ಶೇ.1ರಷ್ಟು ಸಾಧ್ಯತೆ ಇದೆ. ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ರೇಬಿಸ್ ಲಸಿಕೆ ಉಚಿತವಾಗಿ ಲಭ್ಯವಿರುವಂತೆ ಕ್ರಮ ಕೈಗೊಳ್ಳಲಾಗಿದೆ ಎಂದರು.

ಫಿಜಿಷಿಯನ್ ಡಾ. ಸುನೀಲ ಹಬೀಬ ಮಾತನಾಡಿ, ಆಧುನಿಕ ಜೀವನಶೈಲಿ, ಧೂಮಪಾನ, ಮಧುಮೇಹ, ಅಧಿಕ ರಕ್ತದೊತ್ತಡ, ಬೊಜ್ಜು ಹಾಗೂ ಆರೋಗ್ಯದ ಬಗ್ಗೆ ನಿರ್ಲಕ್ಷ್ಯದಿಂದ ಹೃದಯ ಸಂಬಂಧಿ ಸಮಸ್ಯೆಗಳು ಹೆಚ್ಚುತ್ತಿವೆ. ಇತ್ತೀಚಿನ ದಿನಗಳಲ್ಲಿ ಯುವಕರಲ್ಲಿಯೂ ಹಠಾತ್ ಹೃದಯಾಘಾತ ಹಾಗೂ ಹೃದಯ ಸ್ತಂಭನದ ಪ್ರಕರಣಗಳು ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಈ ಕುರಿತು ಜನರಲ್ಲಿ ಪರಿಣಾಮಕಾರಿ ಜಾಗೃತಿ ಮೂಡಿಸುವುದು ಅಗತ್ಯ ಎಂದರು.

ಜಿಲ್ಲಾ ಕಾರ್ಯಕ್ರಮ ಸಂಯೋಜಕ ಡಾ. ರವಿ ಕಡಗಾವಿ ಮಾತನಾಡಿ, 'ಒಂದು ಬಡಿತವನ್ನು ಕೂಡ ತಪ್ಪಿಸಿಕೊಳ್ಳಬೇಡಿ' ಎಂಬ ಈ ವರ್ಷದ ಘೋಷವಾಕ್ಯದ ಮಹತ್ವವನ್ನು ವಿವರಿಸಿದರು.

ಹೃದ್ರೋಗದಿಂದ ಉಂಟಾಗುತ್ತಿರುವ ಜೀವಹಾನಿ ತಗ್ಗಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ 'ಪುನೀತ್ ರಾಜ್ ಕುಮಾರ್ ಹೃದಯ ಜ್ಯೋತಿ' ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ ಎಂದರು.

ಮೃಗಾಲಯದ ಪಶುವೈದ್ಯಾಧಿಕಾರಿ ಡಾ. ಪವಿತ್ರಾ ರೇವಡಿ ಪ್ರಾಸ್ತಾವಿಕವಾಗಿ ಮಾತನಾಡಿ, ಆರೋಗ್ಯ ತಪಾಸಣಾ ಶಿಬಿರದ ಉದ್ದೇಶ ಹಾಗೂ ರೇಬಿಸ್ ಲಸಿಕಾಕರಣದ ಮಹತ್ವ ವಿವರಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಉಪ ವಲಯ ಅರಣ್ಯಾಧಿಕಾರಿ ಪವನ ತಕ್ಕೇದ ಮಾತನಾಡಿ, ಹೃದಯದ ಆರೋಗ್ಯ ಕಾಪಾಡಿಕೊಳ್ಳಲು ಪ್ರತಿದಿನ ವ್ಯಾಯಾಮ, ಯೋಗಾಸನ, ಪೌಷ್ಟಿಕ ಆಹಾರ ಹಾಗೂ ಕನಿಷ್ಠ 7ರಿಂದ 8 ಗಂಟೆಗಳ ಆರೋಗ್ಯಕರ ನಿದ್ರೆ ಅಗತ್ಯ ಎಂದರು.

ಕಾರ್ಯಕ್ರಮದ ಬಳಿಕ ಗದಗ ಮೃಗಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ರಕ್ತದೊತ್ತಡ, ಮಧುಮೇಹ, ಈಸಿಜಿ, ನೇತ್ರ, ಕಫ, ಲೆಪ್ಟೋಸ್ಪೈರೋಸಿಸ್ ಹಾಗೂ ಬ್ರುಸೆಲ್ಲಾ ಪರೀಕ್ಷೆ ನಡೆಸಲಾಯಿತು. ರೇಬಿಸ್ ಲಸಿಕಾಕರಣವನ್ನೂ ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಜಿಲ್ಲಾ ಸಮೀಕ್ಷಣಾ ಘಟಕದ ಅಧಿಕಾರಿಗಳು, ನೇತ್ರಾಧಿಕಾರಿಗಳು, ಕ್ಷಯರೋಗ ನಿಯಂತ್ರಣಾಧಿಕಾರಿಗಳ ಕಚೇರಿಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ ಹುಲಕೋಟಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಮತ್ತು ಗದಗ ಮೃಗಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ನಿಖಿಲ ಕಾರ್ಯಕ್ರಮ ನಿರೂಪಿಸಿದರು. ಉಮೇಶ ವಂದಿಸಿದರು.

> ರೇಬಿಸ್ ಶೇ.100ರಷ್ಟು ಮಾರಕ ಕಾಯಿಲೆಯಾದರೂ ಶೇ.100ರಷ್ಟು ತಡೆಗಟ್ಟಬಹುದಾಗಿದೆ. ಪ್ರಾಣಿಗಳು ಕಚ್ಚಿದಾಗ ಅಥವಾ ಪರಚಿದಾಗ ನಿರ್ಲಕ್ಷ್ಯ ಮಾಡದೆ ತಕ್ಷಣ ಸೂಕ್ತ ಚಿಕಿತ್ಸೆ ಹಾಗೂ ಲಸಿಕೆ ಪಡೆಯಬೇಕು.
>
> – ಡಾ. ಪ್ರವೀಣ ನಿಡಗುಂದಿ, ಜಿಲ್ಲಾ ಎಪಿಡೆಮಿಯಾಲಜಿಸ್ಟ್

### ಸಂಘಟನೆ ಬಲಪಡಿಸಿ, ಅನ್ಯಾಯದ ವಿರುದ್ಧ ಧ್ವನಿ ಎತ್ತಲು ವಿಜಯ ಜಾಧವ ಕರೆ

# ಬಂಜಾರ ಸಮುದಾಯ ಒಗ್ಗಟ್ಟಾದರೆ ಹಕ್ಕು ಪಡೆಯಲು ಸಾಧ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಬಂಜಾರ ಸಮುದಾಯ ಒಗ್ಗಟ್ಟಿನಿಂದ ಸಂಘಟಿತರಾದಾಗ ಮಾತ್ರ ಸಮುದಾಯದ ಹಕ್ಕುಗಳನ್ನು ಪಡೆಯಲು ಸಾಧ್ಯ. ಸಮುದಾಯದ ಮೇಲೆ ನಡೆಯುತ್ತಿರುವ ಅನ್ಯಾಯದ ವಿರುದ್ಧ ಶೈಕ್ಷಣಿಕ, ಸಾಮಾಜಿಕ ಹಾಗೂ ರಾಜಕೀಯವಾಗಿ ಧ್ವನಿ ಎತ್ತಿ ಹೋರಾಟ ನಡೆಸಬೇಕು ಎಂದು ಆಲ್ ಇಂಡಿಯಾ ಬಂಜಾರ ಸೇವಾ ಸಂಘದ ರಾಜ್ಯಾಧ್ಯಕ್ಷ ವಿಜಯ ಜಾಧವ ಕರೆ ನೀಡಿದರು.



ಗದಗ ಜಿಲ್ಲಾ ಘಟಕದ ನೂತನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಂಘಟನೆಯನ್ನು ಜಿಲ್ಲೆಯ ಪ್ರತಿಯೊಂದು ತಾಂಡಾ, ಹೋಬಳಿ ಹಾಗೂ ತಾಲೂಕು ಮಟ್ಟದಲ್ಲಿ ಬಲಪಡಿಸಿ ಗದಗ ಜಿಲ್ಲೆಯನ್ನು ರಾಜ್ಯಕ್ಕೆ ಮಾದರಿ ಜಿಲ್ಲೆಯನ್ನಾಗಿ ರೂಪಿಸಬೇಕು ಎಂದರು.

ನಾಗಾವಿ ತಾಂಡಾದ ಸೋಮಪ್ಪ ಲಮಾಣಿ ಅವರನ್ನು ಗದಗ ಜಿಲ್ಲಾ ಘಟಕದ ನೂತನ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶ ಪತ್ರ ನೀಡಲಾಯಿತು. ಯುವ ಘಟಕದ ರಾಜ್ಯಾಧ್ಯಕ್ಷ ಸುನೀಲ ನಾಯ್ಕ ಮಾತನಾಡಿ, ಯುವಕರನ್ನು ಹೆಚ್ಚಿನ ಸಂಖ್ಯೆಯಲ್ಲಿ ಸಂಘಟನೆಯೊಂದಿಗೆ ಜೋಡಿಸಿ ಸಂಘಟನೆ ಬಲಪಡಿಸಬೇಕು ಎಂದರು.

ನೂತನ ಜಿಲ್ಲಾಧ್ಯಕ್ಷ ಸೋಮಪ್ಪ ಲಮಾಣಿ ಮಾತನಾಡಿ, ಸಂಘಟನೆಯ ಹಿರಿಯರ ಮಾರ್ಗದರ್ಶನ ಹಾಗೂ ಪದಾಧಿಕಾರಿಗಳ ಸಹಕಾರದೊಂದಿಗೆ ಜವಾಬ್ದಾರಿಯನ್ನು ನಿಷ್ಠೆಯಿಂದ ನಿರ್ವಹಿಸುವುದಾಗಿ ತಿಳಿಸಿದರು.

ಗೋವಾ ರಾಜ್ಯಾಧ್ಯಕ್ಷ ಸುರೇಶ ರಜಪೂತ, ಕರ್ನಾಟಕ ರಾಜ್ಯ ಪ್ರಧಾನ ಕಾರ್ಯದರ್ಶಿ ಚಂದ್ರು ಜಾಧವ, ವಿಜಯಪುರ ಜಿಲ್ಲಾ ಕಾರ್ಯಾಧ್ಯಕ್ಷ ಶಿವಾನಂದ ಲಮಾಣಿ, ಕೊಪ್ಪಳ ಜಿಲ್ಲಾಧ್ಯಕ್ಷ ಲಕ್ಷ್ಮಣ ನಾಯಕ ಸೇರಿದಂತೆ ವಿವಿಧ ತಾಂಡಾಗಳ ಮುಖಂಡರು ಹಾಗೂ ಯುವಕರು ಉಪಸ್ಥಿತರಿದ್ದರು.

## ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್

ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ದಿನಪತ್ರಿಕೆಗಳು ಹಾಗೂ ಮಾಧ್ಯಮ ಸಂಸ್ಥೆಗಳಲ್ಲಿ ತಾಲ್ಲೂಕು ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರ್ಹ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ತಿದ್ದುಪಡಿ ಮಾಡಲಾದ ಹೊಸ ಮಾರ್ಗ ಸೂಚಿಯನ್ವಯ ಪೂರ್ಣಾವಧಿ ಅಥವಾ ಅರೆಕಾಲಿಕ ವರದಿಗಾರರಾಗಿ ಕಾರ್ಯ ನಿರ್ವಹಿಸುತ್ತಿರುವ ಪತ್ರಕರ್ತರು ತಮ್ಮ ಮಾಧ್ಯಮ ಸಂಸ್ಥೆಯ ಸಂಪಾದಕರು, ಸ್ಥಾನಿಕ ಸಂಪಾದಕರು ಅಥವಾ ಮುಖ್ಯಸ್ಥರ ಶಿಫಾರಸು ಪತ್ರ ಹಾಗೂ ಸೇವಾ ಪ್ರಮಾಣ ಪತ್ರವನ್ನು ಲಗತ್ತಿಸಿ 'ಸೇವಾ ಸಿಂಧು' ಪೋರ್ಟಲ್ ಮೂಲಕ ಸಮೀಪದ ಗ್ರಾಮ-1 ಕೇಂದ್ರದಲ್ಲಿ ಆನ್‌ಲೈನ್ ಅರ್ಜಿ ಸಲ್ಲಿಸಬಹುದು.

ಈ ಹಿಂದೆ ಇದ್ದ ಮಾರ್ಗಸೂಚಿಯಲ್ಲಿನ 11 ತಿಂಗಳ ವೇತನ ಪತ್ರ ಸಲ್ಲಿಸುವ ಷರತ್ತನ್ನು ಸಡಿಲಿಸಲಾಗಿದೆ. ಅದರ ಬದಲಾಗಿ ಮಾಧ್ಯಮ ಸಂಸ್ಥೆಯ ಸಂಪಾದಕರು, ಸ್ಥಾನಿಕ ಸಂಪಾದಕರು ಅಥವಾ ಮುಖ್ಯಸ್ಥರು ನೀಡುವ ಶಿಫಾರಸು ಪತ್ರವನ್ನು ಪರಿಗಣಿಸಲು ಅವಕಾಶ ಕಲ್ಪಿಸಲಾಗಿದೆ.

ಆನ್‌ಲೈನ್‌ನಲ್ಲಿ ಸಲ್ಲಿಸಿದ ಅರ್ಜಿ ಹಾಗೂ ಲಗತ್ತಿಸಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾ-ರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿದ ಬಳಿಕ ಅರ್ಹ-ರಿಗೆ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ.

ತಾಲೂಕು ಮಟ್ಟದಲ್ಲಿ ಕಾರ್ಯ ನಿರ್ವಹಿಸುವ ಪತ್ರಕರ್ತ-ರಿಗೆ ಸುದ್ದಿ ಸಂಗ್ರಹಣೆ ಹಾಗೂ ಕ್ಷೇತ್ರ ಕಾರ್ಯಕ್ಕೆ ಅನುಕೂಲವಾಗುವಂತೆ ಸರ್ಕಾರ ವಾರ್ತಾ ಇಲಾಖೆಯ ಮೂಲಕ ಉಚಿತ ಬಸ್ ಪಾಸ್‌ಗಳನ್ನು ನೀಡುತ್ತಿದೆ.ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಅಕ್ಟೋಬರ್ 31, 2026ರೊಳಗೆ 'ಸೇವಾ ಸಿಂಧು' ಪೋರ್ಟಲ್ ಮೂಲಕ ಗ್ರಾಮ-1 ಕೇಂದ್ರದಲ್ಲಿ ಅರ್ಜಿ ಸಲ್ಲಿಸುವಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಎಂ.ಎನ್. ಅನುಚೇತ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಧ್ಯಕ್ಷರಾಗಿ ಜಯದೇವ ಮೆಣಸಗಿ ಆಯ್ಕೆ | ಗೌರವ ಕಾರ್ಯದರ್ಶಿಯಾಗಿ ರಾಘವೇಂದ್ರ ಕಾಲವಾಡ

# ವಾಣಿಜ್ಯೋದ್ಯಮ ಸಂಸ್ಥೆಗೆ ಮೆಣಸಗಿ ಸಾರಥ್ಯ



ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ನೂತನ ಪದಾಧಿಕಾ-ರಿಗಳ ಆಯ್ಕೆ ಮಂಗಳವಾರ ಸಂಸ್ಥೆಯ ಸಭಾಂಗಣದಲ್ಲಿ ಮಾಜಿ ಅಧ್ಯಕ್ಷರು ಹಾಗೂ ಕಾರ್ಯಕಾರಿ ಮಂಡಳಿ ಸದಸ್ಯರ ಉಪಸ್ಥಿತಿಯಲ್ಲಿ ಅವಿರೋಧವಾಗಿ ನಡೆಯಿತು.

ಜಯದೇವ ಎಂ. ಮೆಣಸಗಿ ಅವರು ಅಧ್ಯಕ್ಷರಾಗಿ ಹಾಗೂ ರಾಘವೇಂದ್ರ ಎಸ್. ಕಾಲವಾಡ ಅವರು ಗೌರವ ಕಾರ್ಯದರ್ಶಿಯಾಗಿ ಆಯ್ಕೆಯಾಗಿದ್ದಾರೆ.

ಉಪಾಧ್ಯಕ್ಷರಾಗಿ ಅರವಿಂದ ವ್ಹಿ. ಪಟೇಲ್, ಪ್ರಕಾಶ ಎಸ್. ಉಗಲಾಟ ಹಾಗೂ ಶಿವಯ್ಯ ಆರ್. ನಾಲತ್ವಾಡಮಠ, ಸಹ ಕಾರ್ಯದರ್ಶಿಗಳಾಗಿ ರಾಜಣ್ಣ ಬಿ. ಮಲ್ಲಾಡದ ಹಾಗೂ ಅರವಿಂದ ಎಸ್. ಕಾಮತ, ಖಜಾಂಚಿಯಾಗಿ ಮಂಜುನಾಥ ವ್ಹಿ. ವೀರಲಿಂಗಯ್ಯನಮಠ ಆಯ್ಕೆಯಾಗಿದ್ದಾರೆ.

ಸಭೆಯ ಅಧ್ಯಕ್ಷತೆ ವಹಿಸಿದ್ದ ನಿಕಟಪೂರ್ವ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಅವರು ನೂತನ ಅಧ್ಯಕ್ಷ ಜಯದೇವ ಮೆಣಸಗಿ ಅವರಿಗೆ ಸಂಪ್ರದಾಯದಂತೆ ಮಾಲಾರ್ಪಣೆ ಮಾಡಿ ಅಧಿಕಾರ ಹಸ್ತಾಂತರಿಸಿದರು. ನೂತನ ಅಧ್ಯಕ್ಷರಿಂದ ಸಂಸ್ಥೆಗೆ ಉತ್ತಮ ಕಾರ್ಯಗಳು ನಡೆಯಲಿ ಎಂದು ಶುಭ ಹಾರೈಸಿದರು.

ನಿಕಟಪೂರ್ವ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಶೀಕಟ್ಟಿ ಅವರು ನೂತನ ಗೌರವ ಕಾರ್ಯದರ್ಶಿ ರಾಘವೇಂದ್ರ ಕಾಲವಾಡ ಅವ-ರಿಗೆ ಮಾಲಾರ್ಪಣೆ ಮಾಡಿ ಶುಭ ಕೋರಿದರು. ಉಳಿದ ಪದಾಧಿಕಾ-ರಿಗಳು ಸಹ ಔಪಚಾರಿಕವಾಗಿ ಅಧಿಕಾರ ವಹಿಸಿಕೊಂಡರು.

ಮಾಜಿ ಅಧ್ಯಕ್ಷರಾದ ಮೋಹನ ಕೋಟಿ, ವಿರುಪಾಕ್ಷಗೌಡ ದೇಸಾಯಿಗೌಡ್ರ ಹಾಗೂ ಸಂಗಮೇಶ ದುಂದೂರ ಮಾತನಾಡಿ, ಶರಣಬಸಪ್ಪ ಗುಡಿಮನಿ ಅವರ ಅಧಿಕಾರಾವಧಿಯಲ್ಲಿ ಸಂಸ್ಥೆಯ ವತಿಯಿಂದ ಉದ್ಯೋಗ ಮೇಳ ಹಾಗೂ ಗದಗ ಉತ್ಸವ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ನಡೆಸಲಾಗಿದೆ. ಅವರ ಅನುಭವ ಮತ್ತು ಸಹಕಾರ ನೂತನ ಪದಾಧಿಕಾರಿಗಳಿಗೆ ಹಾಗೂ ಸಂಸ್ಥೆಗೆ ಮುಂದುವ-ರಿಯಲಿ ಎಂದು ಆಶಿಸಿದರು.

> ಇದು ಅಧಿಕಾರವಲ್ಲ, ಸೇವೆ ಮಾಡಲು ಸಿಕ್ಕ ಅವಕಾಶ. ಹಿರಿಯರು ಹಾಗೂ ವ್ಯಾಪಾರಸ್ಥರ ಮಾರ್ಗದರ್ಶನದಲ್ಲಿ ಸಂಸ್ಥೆಯ ಹಿತಕ್ಕಾಗಿ ಉತ್ತಮ ಕೆಲಸ ಮಾಡಲು ಪ್ರಯತ್ನಿಸುತ್ತೇನೆ. ವ್ಯಾಪಾರಸ್ಥರ ಸಮಸ್ಯೆಗಳಿಗೆ ಧ್ವನಿಯಾಗಿ ಕಾರ್ಯನಿರ್ವಹಿಸಲು ಸರ್ವರ ಸಹಕಾರ ಅಗತ್ಯ.
>
> – ಜಯದೇವ ಮೆಣಸಗಿ, ನೂತನ ಅಧ್ಯಕ್ಷರು

> ನನ್ನ ಅಧಿಕಾರಾವಧಿಯಲ್ಲಿ ಹಿರಿಯರು, ವ್ಯಾಪಾರಸ್ಥರು ಹಾಗೂ ಅಧಿಕಾರಿಗಳ ಸಹಕಾರದಿಂದ ಹಲವು ಕಾರ್ಯಗಳನ್ನು ಕೈಗೊಳ್ಳಲು ಸಾಧ್ಯವಾಯಿತು. ಚೇಂಬರ್ ನನಗೆ ನೀಡಿದ ಜವಾಬ್ದಾ-ರಿಯಲ್ಲಿ ತೃಪ್ತಿ ಇದೆ. ನೂತನ ತಂಡಕ್ಕೆ ನನ್ನ ಅನುಭವ ಮತ್ತು ಸಹಕಾರ ಸದಾ ಇರುತ್ತದೆ.
>
> – ಶರಣಬಸಪ್ಪ ಗುಡಿಮನಿ, ನಿಕಟಪೂರ್ವ ಅಧ್ಯಕ್ಷರು

ಸಭೆಯಲ್ಲಿ ಮಾಜಿ ಅಧ್ಯಕ್ಷರಾದ ಎಚ್.ವ್ಹಿ. ಶಾನಭೋಗರ, ಆನಂದ ಪೋತ್ನೀಸ್, ಚಂದ್ರು ಬಾಳಿಹಳ್ಳಿಮಠ, ತಾತನಗೌಡ ಪಾಟೀಲ, ಶರಣಪ್ಪ ಕುರಡಗಿ, ಮಲ್ಲಿಕಾರ್ಜುನ ಸುರಕೋಡ, ಶೇಖಣ್ಣ ಗದ್ದಿಕೇರಿ, ಅಶೋಕ ನಿಲೂಗಲ್ಲ, ಈಶಣ್ಣ ಮುನವಳ್ಳಿ, ಮಧುಸೂದನ ಪುಣೇಕರ, ರಾಜಣ್ಣ ಕುರಡಗಿ, ದೇವದಾಸ ಕಾಮತ ಸೇರಿದಂತೆ ಅಶೋಕ ಸಂಕಣ್ಣವರ, ಅರವಿಂದ ಕಾಮತ ಹಾಗೂ ಹುಬ್ಬಳ್ಳಿ ಚೇಂಬರ್ ಮಾಜಿ ಅಧ್ಯಕ್ಷ ಜಿ.ಕೆ. ಆದಪ್ಪಗೌಡ್ರ ಮತ್ತು ಕಾರ್ಯಕಾರಿ ಮಂಡಳಿ ಸದಸ್ಯರು ಉಪಸ್ಥಿತರಿದ್ದರು.

## ವಿಬಿಜಿ-ರಾಮ್-ಜಿ ಯೋಜನೆಯಲ್ಲಿ 125 ದಿನಗಳ ಉದ್ಯೋಗಾವಕಾಶ

### ಅಳತೆಯೇ ಕೂಲಿ ಪಾವತಿಗೆ ಮಾನದಂಡ



ವಿಜಯಸಾಕ್ಷಿ ಸುದ್ದಿ, ರೋಣ

ಗ್ರಾಮೀಣ ಕುಟುಂಬಗಳಿಗೆ ಉದ್ಯೋಗದ ಭದ್ರತೆ ಒದಗಿಸುವ ಉದ್ದೇಶದ ವಿಬಿಜಿ-ರಾಮ್-ಜಿ ಯೋಜನೆಯಡಿ ದೊರೆಯುವ 125 ದಿನಗಳ ಉದ್ಯೋಗಾವಕಾಶವನ್ನು ಅರ್ಹ ಕುಟುಂಬಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ಡಿಐಇಸಿ ವೀರಭದ್ರಪ್ಪ ಸಜ್ಜನ ಹೇಳಿದರು.

ತಾಲೂಕಿನ ಯಾವಗಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಯೋಜನೆಯಡಿ ನಡೆಯುತ್ತಿರುವ ಕೆರೆ ಪುನಶ್ಚೇತನ ಕಾಮಗಾರಿಯ ಎರಡನೇ ದಿನ ಆಯೋಜಿಸಿದ್ದ ಐಇಸಿ ಸಭೆಯಲ್ಲಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶದ ಅಗತ್ಯಗಳಿಗೆ ಅನುಗುಣವಾಗಿ ಕೆರೆ ಪುನಶ್ಚೇತನ, ನೀರು ಸಂರಕ್ಷಣೆ ಹಾಗೂ ಸಾರ್ವಜನಿಕ ಬಳಕೆಯ ವಿವಿಧ ಕಾಮಗಾರಿಗಳನ್ನು ಯೋಜನೆಯಡಿ ಕೈಗೆತ್ತಿಕೊಳ್ಳಲಾಗುತ್ತಿದೆ. ಸ್ಥಳೀಯ ಕಾರ್ಮಿಕರು ಇಂತಹ ಕಾಮಗಾ-ರಿಗಳಲ್ಲಿ ಭಾಗವಹಿಸುವ ಮೂಲಕ ಉದ್ಯೋಗದ ಪ್ರಯೋಜನ ಪಡೆಯಬೇಕು ಎಂದು ಹೇಳಿದರು.

ಕಾಮಗಾರಿ ಸ್ಥಳದಲ್ಲಿ ಕಾರ್ಮಿಕ-ರಿಗೆ ಯೋಜನೆಯ ನಿಯಮಗಳು, ಹಾಜರಾತಿ, ಕೆಲಸದ ಬೇಡಿಕೆ ಸಲ್ಲಿಕೆ ಹಾಗೂ ಕೂಲಿ ಪಾವತಿ ಕು-ರಿತು ಮಾಹಿತಿ ನೀಡಲಾಯಿತು. ಕಾರ್ಮಿಕರು ನಿರ್ವಹಿಸಿದ ಕೆಲಸದ ಪ್ರಮಾಣವನ್ನು ಅಳತೆ ಮಾಡಿ ಅದರ ಆಧಾರದ ಮೇಲೆ ಕೂಲಿ ಪಾವತಿಸಲಾಗುವುದರಿಂದ ನಿಗದಿತ ಅಳತೆಯಂತೆ ಕಾಮಗಾರಿ ನಿರ್ವಹಿಸುವಂತೆ ತಿಳಿಸಲಾಯಿತು.

> ಉದ್ಯೋಗದ ಅವಶ್ಯಕತೆ ಇರುವ ಕುಟುಂಬಗಳು ಮೌಖಿಕ ಮನವಿಗೆ ಸೀಮಿತವಾಗದೆ ನಮೂನೆ-6ರ ಮೂಲಕ ಬೇಡಿಕೆ ದಾಖಲಿಸಿಕೊಳ್ಳುವುದರಿಂದ ಯೋಜನೆಯ ಸೌಲಭ್ಯವನ್ನು ಪಡೆಯುವಲ್ಲಿ ಸ್ಪಷ್ಟತೆ ಮತ್ತು ಪಾರದರ್ಶಕತೆ ಇರುತ್ತದೆ.
>
> – ಐ.ಎಫ್. ಬೊದ್ಲೆಖಾನ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಐ.ಎಫ್. ಬೊದ್ಲೆಖಾನ ಮಾತನಾಡಿ, ಕೆಲಸದ ಅಗತ್ಯವಿರುವ ಕುಟುಂಬಗಳು ಗ್ರಾಮ ಪಂಚಾಯಿತಿಗೆ ನಮೂನೆ-6 ಸಲ್ಲಿಸಿ ಉದ್ಯೋಗದ ಬೇಡಿಕೆ ಯನ್ನು ಅಧಿಕೃತವಾಗಿ ದಾಖಲಿಸಿಕೊಳ್ಳಬೇಕು. ಇದರಿಂದ ಉದ್ಯೋಗ ಒದಗಿಸುವ ಪ್ರಕ್ರಿಯೆ ಎಂದು ತಿಳಿಸಿದರು.

ಕೆರೆ ಪುನಶ್ಚೇತನದಿಂದ ಉದ್ಯೋಗ ಸೃಷ್ಟಿಯ ಜತೆಗೆ ಗ್ರಾಮದ ಜಲಮೂಲವೂ ಅಭಿವೃದ್ಧಿಯಾಗಲಿದೆ. ಕೆರೆಯ ನೀರು ಸಂಗ್ರಹ ಸಾಮರ್ಥ್ಯ ಹೆಚ್ಚುವುದರಿಂದ ಅಂತರ್ಜಲ ಮಟ್ಟ ಸುಧಾರಣೆ ಹಾಗೂ ಮುಂದಿನ ದಿನಗಳಲ್ಲಿ ಕೃಷಿ ಚಟುವಟಿಕೆಗಳಿಗೆ ನೀರಿನ ಲಭ್ಯತೆ ಹೆಚ್ಚಿಸಲು ಸಹಕಾ-ರಿಯಾಗಲಿದೆ ಎಂದು ಸಭೆಯಲ್ಲಿ ವಿವರಿಸಲಾಯಿತು.

### ಇಂದಿರಾ ಕ್ಯಾಂಟೀನ್ ಬಲಪಡಿಸಿ, ಗ್ಯಾರಂಟಿ ಯೋಜನೆ ಅರ್ಹ ಬಡವರಿಗೆ ಮಾತ್ರ ಸೀಮಿತಗೊಳಿಸಿ

# ಬರಗಾಲದ ನಡುವೆ ಹಾಲು, ಬಸ್ ದರ ಏರಿಕೆ ಬೇಡ

ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಬರಗಾಲದ ಪರಿಸ್ಥಿತಿ ಎದುರಾಗಿರುವ ಹಿನ್ನೆಲೆಯಲ್ಲಿ ನಂದಿನಿ ಹಾಲಿನ ದರ ಹಾಗೂ ಬಸ್ ಪ್ರಯಾಣ ದರ ಹೆಚ್ಚಿಸುವ ಪ್ರಸ್ತಾಪವನ್ನು ಕೈಬಿಡಬೇಕು ಅಥವಾ ಕನಿಷ್ಠ ಮಟ್ಟಕ್ಕೆ ಸೀಮಿತಗೊಳಿಸಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಜಿ. ಪರಮೇಶ್ವರ ಅವರಿಗೆ ಪತ್ರ ಬರೆದಿರುವ ಹೊರಟ್ಟಿ, ರೈತರು, ಶ್ರಮಿಕರು ಹಾಗೂ ಬಡ ವರ್ಗದ ಜನರು ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆ ಮತ್ತಷ್ಟು ಆರ್ಥಿಕ ಹೊರೆ ಉಂಟುಮಾಡಲಿದೆ ಎಂದು ತಿಳಿಸಿದ್ದಾರೆ.

ಮುಂಗಾರು ಕೈಕೊಟ್ಟಿರುವುದ-



ನಂದಿನಿ ಹಾಲಿನ ದರವನ್ನು ಪ್ರತಿ ಲೀಟರ್‌ಗೆ 8 ಹೆಚ್ಚಿಸುವ ಪ್ರಸ್ತಾಪ ಹಾಗೂ ಸಾರಿಗೆ ಸಂಸ್ಥೆಗಳ ನಷ್ಟ ಸರಿದೂಗಿಸಲು ಬಸ್ ಪ್ರಯಾಣ ದರವನ್ನು ಶೇ.20ರಿಂದ 40ರವರೆಗೆ ಹೆಚ್ಚಿಸುವ ಉದ್ದೇಶವು ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಹೊರೆಯಾಗಲಿದೆ ಎಂದು ಹೊರಟ್ಟಿ ಅಭಿಪ್ರಾಯಪಟ್ಟಿದ್ದಾರೆ.

> ಬರಗಾಲದ ಸಂಕಷ್ಟದಲ್ಲಿರುವ ರೈತರು, ಶ್ರಮಿಕರು ಹಾಗೂ ಬಡವರ ಮೇಲಿನ ಆರ್ಥಿಕ ಹೊರೆ ಹೆಚ್ಚಾಗದಂತೆ ಸರ್ಕಾರದ ನಿರ್ಧಾರಗಳು ಇರಬೇಕು. ಸಾರ್ವಜನಿಕ ಸಂಪನ್ಮೂಲಗಳನ್ನು ಅಗತ್ಯವಿರುವ ವರ್ಗಕ್ಕೆ ಪರಿಣಾಮಕಾರಿಯಾಗಿ ತಲುಪಿಸುವುದು ಈ ಸಂದರ್ಭದಲ್ಲಿ ಅತ್ಯಂತ ಮುಖ್ಯ.
>
> – ಬಸವರಾಜ ಹೊರಟ್ಟಿ

ಹಾಲಿನ ದರ ಏರಿಕೆಯಿಂದ ಹೋಟೆಲ್‌ಗಳ ಆಹಾರ ದರವೂ ಹೆಚ್ಚಾಗುವ ಸಾಧ್ಯತೆಯಿದೆ. ಬರಗಾಲದಿಂದ ನಗರಗಳಿಗೆ ವಲಸೆ ಬಂದಿರುವ ಶ್ರಮಿಕರು ಹಾಗೂ ದಿನಗೂಲಿ ಕಾರ್ಮಿಕ-ರಿಗೆ ಹೋಟೆಲ್‌ಗಳಲ್ಲಿ ಆಹಾರ ಸೇವಿಸುವುದು ಕಷ್ಟವಾಗಲಿದೆ. ಹೀಗಾಗಿ ರಾಜ್ಯಾದ್ಯಂತ ಮುಚ್ಚಿರುವ ಅಥವಾ ನಿಷ್ಕ್ರಿಯವಾಗಿರುವ ಇಂದಿರಾ ಕ್ಯಾಂಟೀನ್‌ಗಳನ್ನು ತ್ವರಿತವಾಗಿ ಪುನಶ್ಚೇತನಗೊಳಿಸಿ, ಬಡವರಿಗೆ 5ಕ್ಕೆ ತಿಂಡಿ ಹಾಗೂ 10ಕ್ಕೆ ಗುಣಮಟ್ಟದ ಊಟ ಒದಗಿಸುವ ವ್ಯವಸ್ಥೆಯನ್ನು ನಿರಂತರವಾಗಿ ಜಾ-ರಿಗೊಳಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಸರ್ಕಾರದ ಬೊಕ್ಕಸದ ಮೇಲಿನ ಹೊರೆಯನ್ನು ಕಡಿಮೆ ಮಾಡುವ ಉದ್ದೇಶದಿಂದ ಉಚಿತ ಯೋಜನೆಗಳನ್ನು ಎಲ್ಲ-ರಿಗೂ ಸಾಮೂಹಿಕವಾಗಿ ನೀಡುವ ಬದಲು, ಆರ್ಥಿಕವಾಗಿ ಸಬಲರನ್ನು ಹೊರತುಪಡಿಸಿ ಅರ್ಹ ಬಡವರಿಗೆ ಮಾತ್ರ ಸೀಮಿತಗೊಳಿಸುವ ಕುರಿತು ಸರ್ಕಾರ ಪರಿಶೀಲಿಸಬೇಕು ಎಂದು ಹೊರಟ್ಟಿ ಸಲಹೆ ನೀಡಿದ್ದಾರೆ. ಇದರಿಂದ ಉಳಿತಾಯವಾಗುವ ಸಾರ್ವಜನಿಕ ಹಣವನ್ನು ಬರಗಾಲ ಪರಿಹಾರ, ರೈತರ ಸಬ್ಸಿಡಿ ಹಾಗೂ ಇಂದಿರಾ ಕ್ಯಾಂಟೀನ್‌ಗಳ ನಿರ್ವಹಣೆಗೆ ಬಳಸಬಹುದು ಎಂದು ತಿಳಿಸಿದ್ದಾರೆ.

ಬರಗಾಲದ ಸಂದರ್ಭದಲ್ಲಿ ಜನಸಾಮಾನ್ಯರ ಹಿತ ಹಾಗೂ ಶ್ರಮಿಕ ವರ್ಗದ ಹಸಿವು ನೀಗಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಬೇಕು. ಈ ಹಿನ್ನೆಲೆಯಲ್ಲಿ ಇಂದಿರಾ ಕ್ಯಾಂಟೀನ್‌ಗಳನ್ನು ಸರಿಪಡಿಸಿ ಮತ್ತಷ್ಟು ಬಲಪಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿಗಳಿಗೆ ಸಲ್ಲಿಸಿರುವ ಪತ್ರದಲ್ಲಿ ಬಸವರಾಜ ಹೊರಟ್ಟಿ ಮನವಿ ಮಾಡಿದ್ದಾರೆ.

# ಮನೆಗೊಂದು ಗ್ರಂಥಾಲಯದಿಂದ ಜ್ಞಾನದ ಕಣ್ಣು ತೆರೆಯಲಿ



ವಿಜಯಸಾಕ್ಷಿ ಸುದ್ದಿ, ಹೊಳೆಆಲೂರು

ಪ್ರತಿಯೊಬ್ಬರೂ ಸಾಹಿತಿಗಳಾಗ ಬೇಕಿಲ್ಲ. ಆದರೆ ಪ್ರತಿಯೊಬ್ಬರೂ ಸಾಹಿತ್ಯ ಪ್ರೇಮಿಗಳಾಗಬೇಕು. ಪುಸ್ತಕ ಓದುವ ಸಂಸ್ಕೃತಿ ವ್ಯಕ್ತಿತ್ವ ವಿಕಸನಕ್ಕೆ ದಾರಿ ಮಾಡಿಕೊಡುತ್ತದೆ. ಮನೆಮನೆಗಳಲ್ಲಿ ಗ್ರಂಥಾಲಯ ನಿರ್ಮಾಣವಾಗುವುದರಿಂದ ಮಕ್ಕಳಲ್ಲಿ ಓದುವ ಹವ್ಯಾಸ ಬೆಳೆದು ಜ್ಞಾನವಂತ ಸಮಾಜ ನಿರ್ಮಾಣವಾಗಲಿದೆ ಎಂದು ಉದ್ಯಮಿ ಹಾಗೂ ಸಾಹಿತಿ ಎಚ್.ಕೆ. ಪಟೇಲ ಹೇಳಿದರು.

ಹೊಳೆಆಲೂರಿನ ಶ್ರೀ ಯಚ್ಚರೇಶ್ವರ ಮಠದ ಸಭಾಭವನದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ, ಮನೆಗೊಂದು ಗ್ರಂಥಾಲಯ ಅನುಷ್ಠಾನ ಜಿಲ್ಲಾ ಜಾಗೃತಿ ಸಮಿತಿ, ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ ಹಾಗೂ ಕನ್ನಡ ಸಾಹಿತ್ಯ ಪರಿಷತ್ ಹೋಬಳಿ ಘಟಕದ ಸಂಯುಕ್ತ ಆಶ್ರಯದಲ್ಲಿ ಸೋಮವಾರ ನಡೆದ 'ಮನೆಗೊಂದು ಗ್ರಂಥಾಲಯ ಅನುಷ್ಠಾನ ಹಾಗೂ ಅಭಿನಂದನಾ ಸಮಾರಂಭ' ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎ.ಎಸ್. ಮಕನಾದಾರ ಮಾತನಾಡಿ, ಹೊಟ್ಟೆಯ ಹಸಿವಿಗಿಂತ ಬೌದ್ಧಿಕ ಹಸಿವು, ಜ್ಞಾನದ ಹಸಿವು ಹಾಗೂ ಓದಿನ ಹಸಿವಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಹಿರಿಯ ಜಾನಪದ ಕಲಾವಿದ ಹಾಗೂ ಡಯಟ್‌ನ ವಿಶ್ರಾಂತ ಉಪನ್ಯಾಸಕ ರಾಮಪ್ಪ ಫ. ಲೋಟಗೇರಿ ಮಾತನಾಡಿ, ಪ್ರತಿಯೊಂದು ಮನೆಯಲ್ಲೂ ಪುಸ್ತಕಗಳಿರಬೇಕು. ಪುಸ್ತಕಗಳು ಮನುಷ್ಯನ ಅಂತರಂಗದ ಕಣ್ಣುಗಳನ್ನು ತೆರೆಸುವ ಶಕ್ತಿ ಹೊಂದಿವೆ ಎಂದರು.

> ಮನೆಗಳಲ್ಲಿ ಪುಸ್ತಕಗಳಿರುವುದು ಮಾತ್ರವಲ್ಲ, ಅವುಗಳನ್ನು ಓದುವ ವಾತಾವರಣವೂ ನಿರ್ಮಾಣವಾಗಬೇಕು. ಮಕ್ಕಳಲ್ಲಿ ಓದುವ ಹವ್ಯಾಸ ಬೆಳೆಸುವ ಜವಾಬ್ದಾರಿ ಪ್ರತಿಯೊಂದು ಕುಟುಂಬ ಹಾಗೂ ಸಮಾಜದ ಮೇಲಿದೆ.
>
> – ಎಚ್.ಕೆ. ಪಟೇಲ, ಉದ್ಯಮಿ ಹಾಗೂ ಸಾಹಿತಿ

ಪೂಜ್ಯ ಶ್ರೀ ಯಚ್ಚರೇಶ್ವರ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ಕಾರ್ಯಕ್ರಮ ನಡೆಯಿತು. ಎಸ್.ಕೆ. ಆಡಿನ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ರವಿ ಎಸ್. ದೇವರಡ್ಡಿ ಕಾರ್ಯಕ್ರಮ ನಿರ್ವಹಿಸಿದರು.

ಈ ಸಂದರ್ಭದಲ್ಲಿ ಮನೆಗೊಂದು ಗ್ರಂಥಾಲಯ ಅನುಷ್ಠಾನಗೊಳಿಸಿದ ಗಣ್ಯರು ಹಾಗೂ ವಿವಿಧ ಶಾಲಾ-ಕಾಲೇಜುಗಳ 51 ವಿದ್ಯಾರ್ಥಿಗಳಿಗೆ ಕನ್ನಡ ಪುಸ್ತಕ ಪ್ರಾಧಿಕಾರದ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

ಬಿ.ಆರ್. ಬಡಿಗೇರ, ಪ್ರಹ್ಲಾದ ಮುಂಡಾಸದ, ವಿ.ಎಂ. ವಸ್ತ್ರದ, ಶೋಭಾ ಆಡಿನ, ಪಿ.ಡಿ. ಸೇಬಣ್ಣವರ, ರವಿ ದೇವರಡ್ಡಿ, ಶಿವಾನಂದ ಹೂಗಾರ ಸೇ-ರಿದಂತೆ ವಿದ್ಯಾರ್ಥಿಗಳು, ಶಿಕ್ಷಕರು, ಸಾಹಿತಿಗಳು ಹಾಗೂ ಕನ್ನಡಾಭಿಮಾನಿಗಳು ಉಪಸ್ಥಿತ-ರಿದ್ದರು.

### ಅಂಕಗಳ ಜತೆಗೆ ಜ್ಞಾನ, ಸಂಸ್ಕಾರ, ಶಿಸ್ತು ಬೆಳೆಸಿಕೊಳ್ಳಿ: ರಂಭಾಪುರಿ ಜಗದ್ಗುರು

# ಉತ್ತಮ ವ್ಯಕ್ತಿತ್ವ ಬೆಳೆಸಿಕೊಳ್ಳುವುದು ವಿದ್ಯಾರ್ಥಿಗಳ ಗುರಿಯಾಗಲಿ

ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ಶಿಕ್ಷಣವೆಂದರೆ ಕೇವಲ ಅಂಕಗಳನ್ನು ಗಳಿಸುವುದಲ್ಲ. ಜ್ಞಾನ, ಸಂಸ್ಕಾರ, ಶಿಸ್ತು, ಆತ್ಮವಿಶ್ವಾಸ ಹಾಗೂ ಸಮಾಜದ ಬಗ್ಗೆ ಜವಾಬ್ದಾ-ರಿಯನ್ನು ಬೆಳೆಸಿಕೊಳ್ಳುವುದಾಗಿದೆ. ಉತ್ತಮ ಅಂಕಗಳ ಜತೆಗೆ ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಗುರಿಯಾಗಬೇಕು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.



ನಗರದ ಶ್ರೀ ಜಗದ್ಗುರು ರೇಣುಕಾಚಾರ್ಯ ಸಮುದಾಯ ಭವನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಚಿಕ್ಕಮಗಳೂರು ಜಿಲ್ಲಾ ಘಟಕದ ವತಿಯಿಂದ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಹಾಗೂ ಸಾಧಕರ ಸನ್ಮಾನ ಸಮಾರಂಭದಲ್ಲಿ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಇಂದಿನ ವಿದ್ಯಾರ್ಥಿಗಳೇ ಮುಂದಿನ ದಿನಗಳಲ್ಲಿ ವೈದ್ಯರು, ಎಂಜಿನಿಯರ್‌ಗಳು, ಶಿಕ್ಷಕರು, ವಿಜ್ಞಾನಿಗಳು, ಆಡಳಿತಾಧಿಕಾ-ರಿಗಳು, ಉದ್ಯಮಿಗಳು ಹಾಗೂ ಸಮಾಜದ ನಾಯಕರಾಗುತ್ತಾರೆ. ಆದ್ದರಿಂದ ತಮ್ಮ ಪ್ರತಿಭೆಯನ್ನು ಕೇವಲ ವೈಯಕ್ತಿಕ ಯಶಸ್ಸಿಗೆ ಸೀಮಿತಗೊಳಿಸದೆ ಸಮಾಜ ಮತ್ತು ದೇಶದ ಅಭಿವೃದ್ಧಿಗೂ ಕೊಡುಗೆ ನೀಡಬೇಕು ಎಂದರು.

ವಿದ್ಯಾರ್ಥಿಗಳಲ್ಲಿ ಗುರಿ ಸಾಧಿಸುವ ಛಲ ಮತ್ತು ಬಲ ಇರಬೇಕು. 'ಕರ್ತವ್ಯದ ಕಾಲುದಾರಿ, ಕೀರ್ತಿಯ ಹೆದ್ದಾರಿ' ಎಂಬುದನ್ನು ಅರಿತು ನಿರಂತರ ಪರಿಶ್ರಮದಿಂದ ಜೀವನದಲ್ಲಿ ಉನ್ನತಿ ಹಾಗೂ ಶ್ರೇಯಸ್ಸು ಸಾಧಿಸಬೇಕು. ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪುರಸ್ಕರಿಸುವ ಮಹಾಸಭೆಯ ಕಾರ್ಯ ಶ್ಲಾಘನೀಯ ಎಂದರು.

ಸಮಾರಂಭ ಉದ್ಘಾಟಿಸಿ ಮಾತನಾಡಿದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ, ಪ್ರತಿಭಾ ಪುರಸ್ಕಾರವು ವಿದ್ಯಾರ್ಥಿಗಳ ಸಾಧನೆಯ ಅಂತ್ಯವಲ್ಲ. ಇನ್ನಷ್ಟು ಎತ್ತರಕ್ಕೆ ಏರಲು ದೊರೆತ ಪ್ರೇರಣೆಯಾಗಿದೆ ಎಂದರು.

ವಿದ್ಯೆ ಸಾಧಕನ ಸಂಪತ್ತು ಎಂಬುದನ್ನು ಅರಿತು ಸ್ಪಷ್ಟ ಗುರಿ ಹೊಂದಬೇಕು. ಗುರಿ ಜತೆಗೆ ಸೂಕ್ತ ಮಾರ್ಗದರ್ಶನ ಪಡೆಯಬೇಕು. ಶಿಸ್ತು ಮತ್ತು ಸಂಯಮದಿಂದ ಆದರ್ಶ ಬದುಕು ಕಟ್ಟಿಕೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಪ್ರತಿ ಜಿಲ್ಲೆಗೊಂದು ವೀರಶೈವ ಲಿಂಗಾಯತ ವಿದ್ಯಾರ್ಥಿ ನಿಲಯ ಸ್ಥಾಪಿಸುವ ಸಂಕಲ್ಪವನ್ನು ಮಹಾಸಭೆ ಹೊಂದಿದೆ. ಚಿಕ್ಕಮಗಳೂರು ಜಿಲ್ಲಾ ಘಟಕ ಪ್ರತಿವರ್ಷ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪುರಸ್ಕರಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಮಹಿಳಾ ಘಟಕದ ಅಧ್ಯಕ್ಷೆ ವೀಣಾ ಕಾಶಪ್ಪನವರ ಮಾತನಾಡಿ, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವುದು ಅವರ ಮುಂದಿನ ಶಿಕ್ಷಣ ಹಾಗೂ ಜೀವನಕ್ಕೆ ದೊಡ್ಡ ಪ್ರೇರಣೆಯಾಗುತ್ತದೆ ಎಂದರು.

ಜಿಲ್ಲಾ ಘಟಕದ ಅಧ್ಯಕ್ಷ ಎಚ್.ಎಂ. ಲೋಕೇಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರತಿವರ್ಷ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪುರಸ್ಕರಿಸುವ ಮೂಲಕ ಶಿಕ್ಷಣಕ್ಕೆ ಉತ್ತೇಜನ ನೀಡಲಾಗುತ್ತಿದೆ. ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಇನ್ನಷ್ಟು ಸಾಧಿಸುವ ಆತ್ಮವಿಶ್ವಾಸ ಮೂಡಿಸುತ್ತವೆ. ಆರ್ಥಿಕವಾಗಿ ಶಕ್ತರಾದವರು ಬಡ ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವಾಗಬೇಕು ಎಂದರು.

ಶಂಕರದೇವರ ಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ಬೇರುಗಂಡಿ ಬೃಹನ್ಮಠದ ರೇಣುಕ ಮಹಂತ ಶಿವಾಚಾರ್ಯ ಸ್ವಾಮೀಜಿ ಹಾಗೂ ಬೀರೂರು ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ ಉಪದೇಶಾಮೃತ ನೀಡಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಮಹಾ ಪ್ರಧಾನ ಕಾರ್ಯದರ್ಶಿ ಎಸ್. ಗಣೇಶ್ ಶಾಮನೂರು, ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ಮುಕ್ತಾಂಬ, ರಾಜ್ಯ ಕಾರ್ಯದರ್ಶಿ ಎಂ.ಬಿ. ಶಶಿಕಲಾ ಮೂರ್ತಿ, ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ವನಮಾಲ ಮೃತ್ಯುಂಜಯ, ವೀರಶೈವ ಸಮಾಜದ ಅಧ್ಯಕ್ಷ ಬಿ.ಎ. ಶಿವಶಂಕರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಉತ್ತಮ ಅಂಕಗಳನ್ನು ಗಳಿಸುವುದರ ಜೊತೆಗೆ ಉತ್ತಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಗುರಿಯಾಗಬೇಕು. ತಮ್ಮ ಪ್ರತಿಭೆಯನ್ನು ಸಮಾಜ ಮತ್ತು ದೇಶದ ಅಭಿವೃದ್ಧಿಗೂ ಬಳಸುವ ಮನೋಭಾವ ವಿದ್ಯಾರ್ಥಿಗಳಲ್ಲಿ ಬೆಳೆಬೇಕು.
>
> – ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು

ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಪತ್ರೆ ಶೈಲಜಾ ಸದಾಶಿವನ್, ಎಸ್. ಮಂಜುನಾಥ, ಶ್ಯಾಮಲಾ ಮಂಜುನಾಥ, ಬಿ.ಆರ್. ಕವಿತಾ, ಗೌರಾಪುರ ಕೊಟ್ರೇಶ್, ಡಾ. ವಿಜಯಕುಮಾರಿ, ಎಚ್.ಎಂ. ರೇಣುಕಾರಾಧ್ಯ, ಚಿದಾನಂದ, ಕುಮಾರ ಎಸ್. ರುದ್ರಮುನಿ, ಭಾಗ್ಯ ಕುಮಾರ್ ಹಾಗೂ ಶಕುಂತಲಾ ಪಾಟೀಲ ಅವರನ್ನು ಸನ್ಮಾನಿಸಲಾಯಿತು. ನೂರಾರು ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರ ಸ್ವೀಕರಿಸಿದರು. ವೀರಶೈವ ಲಿಂಗಾಯತ ಸಮುದಾಯದ ಗಣ್ಯರು, ಶಿಕ್ಷಣ ಪ್ರೇಮಿಗಳು ಹಾಗೂ ಜಿಲ್ಲಾ ಮತ್ತು ತಾಲೂಕು ಘಟಕಗಳ ಪದಾಧಿಕಾರಿಗಳು ಭಾಗವಹಿಸಿದ್ದರು. ನಂತರ ಪ್ರಸಾದ ವಿನಿಯೋಗ ನಡೆಯಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka